ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 93 Tuesday **29-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 93 ಮಂಗಳವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ರೈತನ 'ಬಿಳಿ ಬಂಗಾರ'ದ ಕನಸಿಗೆ ಬಿಸಿಲಿನ ಬರಸಿಡಿಲು!

ವರುಣ ಕೈಕೊಟ್ಟ ಬೆನ್ನಲ್ಲೇ ಸೂರ್ಯನ ಕೆಂಗಣ್ಣಿಗೆ ಹತ್ತಿ ಬೆಳೆ ಬಲಿ

"ಮುಂಜಾನೆಯ ಮೆರಗು"

ಜಗಳೂರು, ಸೆ.28– ರೈತನ ಹೊಲದಲ್ಲಿ ಬಿಳಿ ಬಂಗಾರವಾಗಿ ಕಂಗೊಳಿಸಬೇಕಿದ್ದ ಹತ್ತಿ, ಈ ಬಾರಿ ಬರದ ಬಿಸಿಲಿಗೆ ಸಿಲುಕಿ ಬಾಡಿ ಹೋಗುವ ಸ್ಥಿತಿ ನಿರ್ಮಾಣವಾಗಿದೆ. ಮೆಕ್ಕೆಜೋಳ, ರಾಗಿ, ಶೇಂಗಾ ಬೆಳೆಗಳ ಬಳಿಕ ಇದೀಗ ಹತ್ತಿ ಬೆಳೆಯ ಮೇಲೂ ಬರದ ಕರಿನೆರಳು ಆವರಿಸಿದ್ದು, ಉತ್ತಮ ಇಳುವರಿಯ ನಿರೀಕ್ಷೆಯಲ್ಲಿದ್ದ ರೈತರ ಕನಸುಗಳು ಮಣ್ಣಾಗುವ ಆತಂಕ ಎದುರಾಗಿದೆ.

ಜಗಳೂರು ತಾಲೂಕಿನ ಕಸಬಾ ಹಾಗೂ ಬಿಳಿಚೋಡು ಹೋಬಳಿ ವ್ಯಾಪ್ತಿಯಲ್ಲಿ ಸೇರಿದಂತೆ 800ಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ಹತ್ತಿ ಬಿತ್ತನೆ ಮಾಡಲಾಗಿದೆ. ಆರಂಭದಲ್ಲಿ ಉತ್ತಮವಾಗಿ ಬೆಳೆದು ಬಂದಿದ್ದ ಹತ್ತಿ, ಇದೀಗ ಹೂವು ಹಾಗೂ ಕಾಯಿ ಬಿಡುವ ನಿರ್ಣಾಯಕ ಹಂತದಲ್ಲಿದೆ. ಆದರೆ ನಿರಂತರ ಮಳೆ ಕೊರತೆ ಹಾಗೂ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಬಿಸಿಲಿನ ತಾಪಮಾನದಿಂದ ಹಲವು ಪ್ರದೇಶಗಳಲ್ಲಿ ಗಿಡಗಳು ನಿಧಾನವಾಗಿ ಒಣಗತೊಡಗಿವೆ.

ಕಾಯಿ ಹಿಡಿಯುವ ಹೊತ್ತಲ್ಲೇ ಬಿಸಿಲಿನ ಹೊಡೆತ

ಹತ್ತಿ ಗಿಡಗಳು ಸಮೃದ್ಧವಾಗಿ ಬೆಳೆದು ಹೂವು, ಕಾಯಿ ಹಿಡಿದು ಹತ್ತಿ ಬಿಡುವ ಹಂತ ತಲುಪಿದ್ದವು. ಈ ಸಂದರ್ಭದಲ್ಲಿ ಒಂದೆರಡು ಉತ್ತಮ ಮಳೆಯಾದರೆ



ಇಳುವರಿ ಕೈಗೆ ಸಿಗುತ್ತದೆ ಎಂಬ ನಿರೀಕ್ಷೆ ರೈತರಲ್ಲಿತ್ತು. ಆದರೆ ವರುಣನ ಕೃಪೆ ಕೈಕೊಟ್ಟ ಪರಿಣಾಮ ಹತ್ತಿ ಗಿಡಗಳಿಗೆ ಅಗತ್ಯ ತೇವಾಂಶ ದೊರೆಯದೆ, ಎಲೆಗಳು ಬಾಡಿ, ಗಿಡಗಳು ಒಣಗುತ್ತಿರುವ ದೃಶ್ಯ ಹಲವು ಹೊಲಗಳಲ್ಲಿ ಕಂಡುಬರುತ್ತಿದೆ.

ಕೆಲವು ಪ್ರದೇಶಗಳಲ್ಲಿ ಹತ್ತಿ ಗಿಡಗಳಲ್ಲಿ ಹೂವು ಮತ್ತು ಕಾಯಿಗಳು ಕಾಣಿಸಿಕೊಂಡಿದ್ದರೂ, ನಿರೀಕ್ಷಿತ ಪ್ರಮಾಣದಲ್ಲಿ ಕಾಯಿಗಳು ಬೆಳೆಯದೆ ಇಳುವರಿ ಕುಂಠಿತವಾಗುವ ಆತಂಕ ರೈತರನ್ನು ಕಾಡುತ್ತಿದೆ. ಮತ್ತೊಂದೆಡೆ ಕೆಲವು ಹೊಲಗಳಲ್ಲಿ ಗಿಡಗಳು ಸಂಪೂರ್ಣವಾಗಿ ಒಣಗುವ ಹಂತ ತಲುಪಿವೆ.

ನೀರಾವರಿ ಇದ್ದರೂ ಬಿಸಿಲಿನ ತೀವ್ರತೆ!

ಸಾಮಾನ್ಯವಾಗಿ ಮಳೆಯಾಧಾರಿತ ಪ್ರದೇಶಗಳಲ್ಲಿ ಹತ್ತಿ ಬೆಳೆಗೆ ಮಳೆ ಕೊರತೆ–ಯಾದರೆ ಸಮಸ್ಯೆ ಎದುರಾಗುವುದು ಸಹಜ. ಆದರೆ ಈ ಬಾರಿ ಕೆಲವು ನೀರಾವರಿ ಸೌಲಭ್ಯವಿರುವ ಪ್ರದೇಶಗಳಲ್ಲಿಯೂ ಬಿಸಿಲಿನ ತೀವ್ರತೆ ಬೆಳೆಗೆ ಹೊಡೆತ ನೀಡುತ್ತಿದೆ.

ಬೋರ್‌ವೆಲ್ ನೀರಿನ ಲಭ್ಯತೆ ಇರುವ ರೈತರು ಸಾಧ್ಯವಾದಷ್ಟು ನೀರು ಹಾಯಿಸುತ್ತಿದ್ದರೂ, ನಿರಂತರ ಬಿಸಿಲು ಹಾಗೂ ಮಣ್ಣಿನ ತೇವಾಂಶ ವೇಗವಾಗಿ ಕಡಿಮೆಯಾಗುತ್ತಿರುವುದರಿಂದ ಗಿಡಗಳನ್ನು ಉಳಿಸಿಕೊಳ್ಳುವುದು ಸವಾಲಾಗಿದೆ. ನೀರು

> "ಮೂರು ಎಕರೆ ಪ್ರದೇಶದಲ್ಲಿ ಹತ್ತಿ ಬೆಳೆದಿದ್ದೇನೆ. ಆರಂಭದಲ್ಲಿ ಬೆಳೆ ಉತ್ತಮವಾಗಿತ್ತು. ಆದರೆ ದಿನದಿಂದ ದಿನಕ್ಕೆ ಬಿಸಿಲಿನ ತಾಪ ಹೆಚ್ಚಾಗುತ್ತಿದ್ದು, ಗಿಡಗಳು ಒಣಗತೊಡಗಿವೆ. ಹೂವು–ಕಾಯಿ ಬಂದರೂ ಇಳುವರಿ ಸಿಗುತ್ತದೆ–ಯೇ ಎಂಬ ಆತಂಕವಿದೆ. ಈಗ ಮಳೆಯೊಂದೇ ನಮ್ಮ ಭರವಸೆ."
>
> **--- ರೈತ ಬಡಪ್ಪ**

ಹಾಯಿಸಿದರೂ ಕೆಲವೇ ದಿನಗಳಲ್ಲಿ ಹೊಲ ಮತ್ತೆ ಒಣಗುವ ಸ್ಥಿತಿ ನಿರ್ಮಾಣವಾಗಿದೆ.

ಉತ್ತಮ ದರದ ನಿರೀಕ್ಷೆ; ಇಳುವರಿಯದ್ದೇ ಚಿಂತೆ

ಈ ಬಾರಿ ಹತ್ತಿಗೆ ಮಾರುಕಟ್ಟೆಯಲ್ಲಿ ಉತ್ತಮ ದರ ಸಿಗುವ ನಿರೀಕ್ಷೆ ರೈತರಲ್ಲಿದೆ. ಹೀಗಾಗಿ ಹೆಚ್ಚಿನ ಇಳುವರಿ ಪಡೆದು ಬೆಳೆ ಖರ್ಚು, ಸಾಲ ಹಾಗೂ ಕುಟುಂಬದ ಆರ್ಥಿಕ ಹೊರೆ ತೀರಿಸಿಕೊಳ್ಳಬಹುದು ಎಂಬ ಆಶಾಭಾವನೆಯಲ್ಲಿದ್ದರು. ಆದರೆ ಬೆಳೆಯ ನಿರ್ಣಾಯಕ ಹಂತದಲ್ಲೇ ಮಳೆ ಕೈಕೊಟ್ಟಿರುವುದು ರೈತರ ಲೆಕ್ಕಾಚಾರವನ್ನೇ ಬುಡಮೇಲು ಮಾಡುವ ಸಾಧ್ಯತೆ ಮೂಡಿಸಿದೆ.

ಮೆಕ್ಕೆಜೋಳ, ರಾಗಿ ಹಾಗೂ ಶೇಂಗಾ ಬೆಳೆಗಳ ಸಂಕಷ್ಟದ ಬೆನ್ನಲ್ಲೇ ಹತ್ತಿಗೂ ಬರದ ಬಿಸಿ ತಟ್ಟಿರುವುದರಿಂದ ತಾಲೂಕಿನ ಕೃಷಿ ವಲಯದಲ್ಲಿ ಆತಂಕ ಹೆಚ್ಚಾಗಿದೆ.



ಸರ್ಕಾರ ಹಾಗೂ ಕೃಷಿ ಇಲಾಖೆ ಹತ್ತಿ ಬೆಳೆಗಾರರ ಹೊಲಗಳಿಗೆ ಭೇಟಿ ನೀಡಿ ವಾಸ್ತವಿಕ ಬೆಳೆಹಾನಿ ಪರಿಶೀಲಿಸಿ, ಅಗತ್ಯ ಪರಿಹಾರ ಕ್ರಮ ಕೈಗೊಳ್ಳಬೇಕು ಎಂಬುದು ರೈತರ ಒತ್ತಾಯವಾಗಿದೆ.

ರೈತರ ನಿರೀಕ್ಷೆ ಏನು?

ಮಳೆ ಕೊರತೆಯಿಂದ ಹತ್ತಿ ಸೇರಿದಂತೆ ವಿವಿಧ ಬೆಳೆಗಳಿಗೆ ಉಂಟಾಗಿರುವ ಹಾನಿಯ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ ವೈಜ್ಞಾನಿಕವಾಗಿ ಬೆಳೆಹಾನಿ ಅಂದಾಜು ಮಾಡಬೇಕು. ಬರಪೀಡಿತ ಪ್ರದೇಶಗಳಲ್ಲಿ ಬೆಳೆ ವಿಮೆ, ಪರಿಹಾರ ಹಾಗೂ ಇತರ ಸರ್ಕಾರಿ ನೆರವು ತಲುಪಿಸುವಂತೆ ರೈತರು ಆಗ್ರಹಿಸುತ್ತಿದ್ದಾರೆ.

ಮಳೆ ಕೈಕೊಟ್ಟರೂ ಬೆಳೆ ಉಳಿಸಿಕೊಳ್ಳಲು ಹೋರಾಡುತ್ತಿರುವ ರೈತರ ಹೊಲಗಳಲ್ಲಿ ಈಗ ಬಿಳಿ ಹತ್ತಿಯ ಬದಲು ಒಣಗುತ್ತಿರುವ ಗಿಡಗಳೇ ಕಾಣಿಸುತ್ತಿವೆ. ವರುಣ ಕೃಪೆಗಾಗಿ ರೈತರ ಕಣ್ಣುಗಳು ಆಕಾಶದತ್ತ ನೆಟ್ಟಿದ್ದು, ಮತ್ತೊಂದು ಉತ್ತಮ ಮಳೆಯ ನಿರೀ–ಕ್ಷೆಯೇ ಅವರ ಕೊನೆಯ ಆಶೆಯಾಗಿದೆ.

ಬರದ ನಡುವೆ ಬಿಳಿ ಬಂಗಾರದ ಬೆಳೆ ಉಳಿಸಿಕೊಳ್ಳಲು ರೈತರ ಹೋರಾಟ ಮುಂದುವರಿದಿದೆ. ಮಳೆ ಬಾರದಿದ್ದರೆ ಹತ್ತಿಯೂ ಕೈಕೊಡುವ ಭೀತಿ ಎದುರಾಗಿದೆ.

ಮಿನಿ ಟ್ಯಾಂಕ್‌ನಿಂದ ನೀರು ಪೋಲು; ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ

"ಮುಂಜಾನೆಯ ಮೆರಗು"

ಜಗಳೂರು ಸೆ, 28– ತಾಲೂಕಿನಾದ್ಯಂತ ಬರದ ಪರಿಸ್ಥಿತಿ ಎದುರಾಗಿದ್ದು, ಕುಡಿಯುವ ನೀರಿಗಾಗಿ ಜನರು ಪರದಾಡುತ್ತಿರುವ ಸಂದರ್ಭದಲ್ಲಿ ಪಟ್ಟಣದ ಹೌಸಿಂಗ್ ಬೋರ್ಡ್‌ಗೆ ತೆರಳುವ ಮಾರ್ಗದಲ್ಲಿರುವ ಮಿನಿ ಟ್ಯಾಂಕ್‌ನಿಂದ ನೀರು ತುಂಬಿ ಹರಿದು ಪೋಲಾಗುತ್ತಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಸಂತೆ ಪ್ರದೇಶಕ್ಕೆ ಆಗಮಿಸುವ ಸಾರ್ವಜನಿಕರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಪಟ್ಟಣ ಪಂಚಾಯಿತಿ ವತಿಯಿಂದ ಮಿನಿ ನೀರಿನ ಟ್ಯಾಂಕ್ ನಿರ್ಮಿಸಲಾಗಿದೆ. ಆದರೆ ಟ್ಯಾಂಕ್ ತುಂಬಿದ ಬಳಿಕವೂ ನೀರು ನಿರಂತರವಾಗಿ ಹೊರಚೆಲ್ಲುತ್ತಿದ್ದು, ರಸ್ತೆ ಬದಿಯಲ್ಲಿ ಹರಿದು ವ್ಯರ್ಥವಾಗುತ್ತಿದೆ.

ಒಂದೆಡೆ ಬರದ ತೀವ್ರತೆ, ಮತ್ತೊಂದೆಡೆ ಕುಡಿಯುವ ನೀರಿನ ಸಮಸ್ಯೆ



ಎದುರಾಗಿರುವಾಗ ಅಮೂಲ್ಯವಾದ ಜೀವಜಲ ಹೀಗೆ ಪೋಲಾಗುತ್ತಿರುವುದು ವಿಪರ್ಯಾಸವಾಗಿದೆ. ನೀರು ಪೋಲಾಗುತ್ತಿರುವುದನ್ನು ತಕ್ಷಣ ತಡೆದು, ಟ್ಯಾಂಕ್‌ಗೆ ಸೂಕ್ತ ನಿಯಂತ್ರಣ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಆಗ್ನೇಯ ಪದವೀಧರ ಕ್ಷೇತ್ರ ಚುನಾವಣೆ: ಜಗಳೂರಿನಲ್ಲಿ ಸಿದ್ಧತೆ ಪೂರ್ಣ

ತಾಲೂಕಿನಲ್ಲಿ 3,331 ಮತದಾರರು; ನಾಲ್ಕು ಮತಗಟ್ಟೆ ಸ್ಥಾಪನೆ

"ಮುಂಜಾನೆಯ ಮೆರಗು"

ಜಗಳೂರು, ಸೆ.28– ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಜಗಳೂರು ತಾಲೂಕು ಆಡಳಿತ ಹಾಗೂ ಚುನಾವಣಾ ಶಾಖೆಯಿಂದ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಚುನಾವಣಾ ವೇಳಾಪಟ್ಟಿ ಪ್ರಕಟವಾಗಿರುವ ಹಿನ್ನೆಲೆಯಲ್ಲಿ ತಾಲೂಕಿನಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಚುನಾವಣಾ ಪ್ರಕ್ರಿಯೆ ಮುಕ್ತಾಯವಾಗುವವರೆಗೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು ಎಂದು ತಹಸೀಲ್ದಾರ್ ಗುರುಬಸವರಾಜ್ ತಿಳಿಸಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಚುನಾವಣಾ ಸಿದ್ಧತೆಗಳ ಕುರಿತು ಮಾಹಿತಿ ನೀಡಿದ ಅವರು, ಜಗಳೂರು ತಾಲೂಕಿನಲ್ಲಿ ಒಟ್ಟು 3,331 ಪದವೀಧರ ಮತದಾರರು ಇದ್ದಾರೆ. ಅರ್ಹ ಪದವೀಧರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸುವ ಪ್ರಕ್ರಿಯೆಗೆ ಈಗಾಗಲೇ ಅವಕಾಶ ಕಲ್ಪಿಸಲಾಗಿದ್ದು, ಚುನಾವಣಾ ಆಯೋಗದ ನಿರ್ದೇಶನದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.

ನಾಲ್ಕು ಮತಗಟ್ಟೆಗಳ ವ್ಯವಸ್ಥೆ

ತಾಲೂಕಿನಲ್ಲಿ ಮತದಾರರಿಗೆ ಅನುಕೂಲವಾಗುವಂತೆ ಒಟ್ಟು ನಾಲ್ಕು ಮತಗಟ್ಟೆಗಳನ್ನು ಸ್ಥಾಪಿಸಲು ಸಿದ್ಧತೆ



ಮಾಡಿಕೊಳ್ಳಲಾಗಿದೆ. ಜಗಳೂರು ಪಟ್ಟಣದ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಎರಡು ಮತಗಟ್ಟೆಗಳನ್ನು ಹಾಗೂ ಬಿಳಿಚೋಡು ಮತ್ತು ಹೊಸಕೆರೆ ಗ್ರಾಮಗಳಲ್ಲಿ ತಲಾ ಒಂದು ಮತಗಟ್ಟೆ ಸ್ಥಾಪಿಸಲಾಗುವುದು ಎಂದು ತಹಸೀಲ್ದಾರ್ ಮಾಹಿತಿ ನೀಡಿದರು.

ಮತದಾನದ ಸಂದರ್ಭದಲ್ಲಿ ಮತದಾರರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮೂಲಸೌಕರ್ಯ, ಭದ್ರತೆ ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಮಾಡಲಾಗುವುದು. ಚುನಾವಣಾ ಸಿಬ್ಬಂದಿಗೆ ಅಗತ್ಯ ಸೂಚನೆಗಳನ್ನು ನೀಡಲಾಗಿದ್ದು, ಮತದಾನ ಪ್ರಕ್ರಿಯೆಯನ್ನು ನಿಯಮಾನುಸಾರ ನಡೆಸಲು ಸಿದ್ಧತೆ ಕೈಗೊಳ್ಳಲಾಗಿದೆ ಎಂದರು.

ಅ.23ರಂದು ಮತದಾನ

ಚುನಾವಣಾ ಆಯೋಗ ಪ್ರಕಟಿಸಿರುವ ವೇಳಾಪಟ್ಟಿಯಂತೆ ಸೆ.29ರಂದು ಚುನಾವಣಾ ಅಧಿಸೂಚನೆ ಹೊರಬೀಳಲಿದೆ. ಅ.6 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, ಅ.7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ಅ.9 ಕೊನೆಯ ದಿನವಾಗಿದೆ.

ಅ.23ರಂದು ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಅ.27ರಂದು ಮತ ಎಣಿಕೆ ನಡೆಯಲಿದೆ. ಅ.31ರೊಳಗೆ ಸಂಪೂರ್ಣ ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ.

ಚುನಾವಣೆ ವೇಳಾಪಟ್ಟಿ ಪ್ರಕಟವಾಗುತ್ತಿದ್ದಂತೆ ಸಂಬಂಧಪಟ್ಟ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದ್ದು, ಸರ್ಕಾರಿ ಕಾರ್ಯಕ್ರಮಗಳು, ಪ್ರಚಾರ ಚಟುವಟಿಕೆಗಳು ಹಾಗೂ ಚುನಾವಣಾ ಸಂಬಂಧಿತ ಕಾರ್ಯಗಳಲ್ಲಿ ನಿಯಮಾವಳಿಗಳನ್ನು ಪಾಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಮತದಾರರಿಗೆ ಅಗತ್ಯ ಮಾಹಿತಿ

ಆಗ್ನೇಯ ಪದವೀಧರ ಕ್ಷೇತ್ರವು ದಾವಣಗೆರೆ ಜಿಲ್ಲೆಯ ಜಗಳೂರು, ದಾವಣಗೆರೆ ಮತ್ತು ಹರಿಹರ ತಾಲೂಕುಗಳನ್ನು ಒಳಗೊಂಡಿದ್ದು, ಇದರೊಂದಿಗೆ ಚಿತ್ರದುರ್ಗ, ತುಮಕೂರು, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಯೂ ಸೇರಿದೆ.

ಚುನಾವಣಾ ಸಿದ್ಧತೆಗಳ ಕುರಿತು ಚುನಾವಣಾ ಸಿಬ್ಬಂದಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲಾಗಿದ್ದು, ಮತದಾನ ದಿನದಂದು ಯಾವುದೇ ಗೊಂದಲಕ್ಕೆ ಅವಕಾಶವಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಚುನಾವಣಾ ಶಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಸಂವಿಧಾನವೇ ದೇಶದ ಏಕತೆ

ಸಹೋದರತೆಗೆ ಮೂಲ: ಶಾಸಕ ದೇವೇಂದ್ರಪ್ಪ



"ಮುಂಜಾನೆಯ ಮೆರಗು"

ಜಗಳೂರು ಸೆ, 28– ಭಾರತ ದೇಶವು ವಿವಿಧ ಜಾತಿ, ಧರ್ಮ, ಭಾಷೆ ಹಾಗೂ ಸಂಸ್ಕೃತಿಗಳ ವೈವಿಧ್ಯತೆಯನ್ನು ಹೊಂದಿದ್ದರೂ ಎಲ್ಲರೂ ಪರಸ್ಪರ ಹೊಂದಾಣಿಕೆ ಹಾಗೂ ಸಹೋದರತೆಯಿಂದ ಜೀವನ ನಡೆಸುತ್ತಿರುವುದಕ್ಕೆ ಸಂವಿಧಾನವೇ ಪ್ರಮುಖ ಕಾರಣವಾಗಿದೆ ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಸೋಮವಾರ ಪಟ್ಟಣದ ನಲಂದ ಕಾಲೇಜು ಸಮೀಪ ಅಕುರಥ ಗಣೇಶ ಸಮಿತಿ ವತಿಯಿಂದ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಭಾರತವು ವಿವಿಧ ಧರ್ಮ ಮತ್ತು ಜಾತಿಗಳ ಜನರು ಒಟ್ಟಾಗಿ ಬದುಕುತ್ತಿರುವ ದೇಶವಾಗಿದೆ. ಭಿನ್ನತೆಯ ನಡುವೆಯೂ ಪರಸ್ಪರ ಗೌರವ, ಸಹಬಾಳ್ವೆ ಹಾಗೂ ಸಹೋದರತೆಯ ಮನೋಭಾವದಿಂದ ಜೀವನ ನಡೆಸಲು ನಮ್ಮ ಸಂವಿಧಾನವು ಅಗತ್ಯವಾದ ಹಕ್ಕು ಮತ್ತು ಸಮಾನತೆಯನ್ನು ಕಲ್ಪಿಸಿದೆ. ಪ್ರತಿಯೊಬ್ಬರೂ ಜಾತಿ, ಧರ್ಮದ ಭೇದ ಮರೆತು ಶಾಂತಿ, ಸೌಹಾರ್ದತೆ ಹಾಗೂ ಒಗ್ಗಟ್ಟಿನಿಂದ ಬದುಕಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಕುರಥ ಗಣೇಶ ಪ್ರತಿಷ್ಠಾಪನಾ ಸಮಿತಿಯ ಸದಸ್ಯರು, ಸಾರ್ವಜನಿಕರು ಹಾಗೂ ವಿವಿಧ ಮುಖಂಡರು ಉಪಸ್ಥಿತರಿದ್ದರು. ಬಳಿಕ ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆ ನಡೆಯಿತು.

ಯುವಜನರಿಗೆ ಉದ್ಯೋಗ ಭದ್ರತೆ ನೀಡಲು 'ಬನೇಗಾ' ಕಾಯ್ದೆ ಜಾರಿಗೊಳಿಸಿ

"ಮುಂಜಾನೆಯ ಮೆರಗು"

ಜಗಳೂರು, ಸೆ.28– ದೇಶದಲ್ಲಿ ಹೆಚ್ಚುತ್ತಿರುವ ನಿರುದ್ಯೋಗ ಸಮಸ್ಯೆಗೆ ಪರಿಹಾರ ಕಲ್ಪಿಸಿ ಯುವಜನರಿಗೆ ಉದ್ಯೋಗ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು 'ಭಗತ್ ಸಿಂಗ್ ರಾಷ್ಟ್ರೀಯ ಉದ್ಯೋಗ ಖಾತ್ರಿ ಕಾಯ್ದೆ' (ಬನೇಗಾ) ಜಾರಿಗೆ ತರಬೇಕು ಎಂದು ಎಐವೈಎಫ್ ರಾಜ್ಯ ಮುಖಂಡ ಮಾದಿಹಳ್ಳಿ ಮಂಜುನಾಥ್ ಆಗ್ರಹಿಸಿದರು.

ಪಟ್ಟಣದ ಅಂಬೇಡ್ಕರ್ ಮೆಟ್ರಿಕ್ ನಂತರದ ವಸತಿನಿಲಯದಲ್ಲಿ ಅಖಿಲ ಭಾರತ ವಿದ್ಯಾರ್ಥಿ ಒಕ್ಕೂಟ (ಎಐಎಸ್‌ಎಫ್) ವತಿಯಿಂದ ಭಗತ್ ಸಿಂಗ್ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಭಗತ್ ಸಿಂಗ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ದೇಶದಲ್ಲಿ ವರ್ಷದಿಂದ ವರ್ಷಕ್ಕೆ ನಿರುದ್ಯೋಗ ಪ್ರಮಾಣ ಹೆಚ್ಚಾಗುತ್ತಿದ್ದು,



ಯುವಜನರಿಗೆ ಉದ್ಯೋಗ ಕಲ್ಪಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಬೇಕು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬರುವ ಮುನ್ನ ಪ್ರತಿವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ನೀಡಿದ್ದ ಭರವಸೆ ಈಡೇರಿಲ್ಲ ಎಂದು ಅವರು ಆರೋಪಿಸಿದರು.

ಸರ್ಕಾರಿ ಸ್ವಾಮ್ಯದ ಸಂಸ್ಥೆಗಳನ್ನು ಖಾಸಗೀಕರಣಗೊಳಿಸುವುದರಿಂದ ಉದ್ಯೋಗಾವಕಾಶಗಳು ಕುಂಠಿತವಾಗುತ್ತಿವೆ. ಕಾರ್ಮಿಕ ಕಾಯ್ದೆಗಳಿಗೆ ತಿದ್ದುಪಡಿ ತರುವ ಮೂಲಕ ಕಾರ್ಮಿಕರ ಹಕ್ಕುಗಳಿಗೆ ಧಕ್ಕೆಯಾಗುತ್ತಿದೆ. ಸರ್ಕಾರಿ ಇಲಾಖೆ ಹಾಗೂ ಸಾರ್ವಜನಿಕ ವಲಯದ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಗುರುತಿಸಿ ಪ್ರತಿವರ್ಷ ನೇಮಕಾತಿ ಪ್ರಕ್ರಿಯೆ ನಡೆಸಬೇಕು. ಉದ್ಯೋಗ ದೊರೆಯುವವರೆಗೆ ನಿರುದ್ಯೋಗಿ ಯುವಜನರಿಗೆ ಮಾಸಿಕ 10 ಸಾವಿರ ನಿರುದ್ಯೋಗ ಭತ್ಯೆ ನೀಡಬೇಕು ಎಂದು ಒತ್ತಾಯಿಸಿದರು.

ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಸಿದ್ದಮ್ಮನಹಳ್ಳಿ ನಿಂಗರಾಜ್ ಮಾತನಾಡಿ, ಭಗತ್ ಸಿಂಗ್ ಅವರ ಜೀವನ ಧೈರ್ಯ, ದೇಶಭಕ್ತಿ, ತ್ಯಾಗ ಮತ್ತು ಸಾಮಾಜಿಕ ನ್ಯಾಯದ ಚಿಂತನೆಗಳಿಗೆ ಸಂಕೇತವಾಗಿದೆ. ಅವರ ವಿಚಾರಗಳು ಇಂದಿಗೂ ವಿದ್ಯಾರ್ಥಿ ಮತ್ತು ಯುವಜನರಿಗೆ ಸ್ಫೂರ್ತಿಯಾಗಿವೆ. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಎಐಟಿಯುಸಿ ಕಾರ್ಯದರ್ಶಿ ತಿಪ್ಪೇಸ್ವಾಮಿ, ಪರಸಪ್ಪ, ಪ್ರದೀಪ್, ಎಐಎಸ್‌ಎಫ್ ಮುಖಂಡರಾದ ಅಶೋಕ, ಬೋರೇಶ್, ತಿಪ್ಪೇಸ್ವಾಮಿ, ಶಶಾಂಕ್, ಸುದರ್ಶನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**Editor, Publisher & Owner of the News Paper: RAVIKUMARA J.O, MUNJANEYA MERAGU, JC

ದೌರ್ಜನ್ಯ ತಡೆ ಕಾಯ್ದೆಯಡಿ 54 ಪ್ರಕರಣ ದಾಖಲು; 143 ಸಂತ್ರಸ್ತರಿಗೆ 114.98 ಲಕ್ಷಪರಿಹಾರ ಧನವಿತರಣೆ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 28– 2026 ರ ಜನವರಿ 01 ರಿಂದ ಸೆಪ್ಟೆಂಬರ್ 28 ರವರೆಗಿನ ಅವಧಿಯಲ್ಲಿ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆಯಡಿ ಒಟ್ಟು 143 ಸಂತ್ರಸ್ತರಿಗೆ 114.98 ಲಕ್ಷಪರಿಹಾರ ಧನವನ್ನುವಿತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿಜಿ.ಎಂ ಅವರು ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಮೂರನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೌರ್ಜನ್ಯ ತಡೆ ಕಾಯ್ದೆಯಡಿ 8 ಪೋ–ಕ್ಸೋ ಹಾಗೂ 47 ಇತರೆ ದೌರ್ಜನ್ಯ ಪ್ರಕರಣಗಳು ಸೇರಿದಂತೆ ಒಟ್ಟು 55 ಪ್ರಕರಣಗಳಲ್ಲಿ ಪರಿಹಾರ ಧನ ಬಿಡುಗ–ಡೆ ಮಾಡಲಾಗಿದ್ದು (ಕೊಲೆ ಪ್ರಕರಣಗಳು – 0), 27 ಪ್ರಕರಣಗಳಲ್ಲಿ ಚಾರ್ಜ್‌ಶೀಟ್ ಸಲ್ಲಿಸಲಾಗಿದೆ. ಮಂಜೂರಾದ ಒಟ್ಟು ಪರಿಹಾರ ಮೊತ್ತದಲ್ಲಿ ಎಫ್‌ಐಆರ್ ಹಂತದಲ್ಲಿ 57.98 ಲಕ್ಷಹಾಗೂ ಚಾರ್ಜ್‌ಶೀಟ್‌ಹಂತದಲ್ಲಿ 57.00 ಲಕ್ಷಬಿಡುಗಡೆಯಾಗಿದ್ದು, ಒಟ್ಟು 101 ಪರಿಶಿಷ್ಟ ಜಾತಿ ಹಾಗೂ 42 ಪರಿಶಿಷ್ಟ ಪಂಗಡದ ಫಲಾನುಭವಿ ಸಂತ್ರಸ್ತರು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 2026 ರ ಜನವರಿ 01 ರಿಂದ ಸೆಪ್ಟೆಂಬರ್ 25 ರವರೆಗಿನ ಅವಧಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆಯಡಿ ಒಟ್ಟು 54 ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ. ಇವುಗಳಲ್ಲಿ ಜೂನ್ ಅಂತ್ಯದವರೆಗೆ 41, ಜುಲೈನಲ್ಲಿ 4, ಆಗಸ್ಟ್‌ನಲ್ಲಿ 6 ಹಾಗೂ ಸೆಪ್ಟೆಂಬರ್‌ನಲ್ಲಿ 3 ಪ್ರಕರಣಗಳು ದಾಖಲಾಗಿದ್ದು, ನಿಯಮಾವಳಿಯಂತೆ ನಿಗದಿತ 60 ದಿನಗಳ ಕಾಲಮಿತಿಯೊಳಗೆ ಒಟ್ಟು 31 ಪ್ರಕರಣಗಳಲ್ಲಿ ಚಾರ್ಜ್‌ಶೀಟ್ (ದೋಷಾರೋಪಣೆ ಪಟ್ಟಿ) ಸಲ್ಲಿಸಲಾಗಿದೆ. ಪ್ರಸ್ತುತ 13 ಪ್ರಕರಣಗಳು ತನಿಖಾ ಹಂತದಲ್ಲಿದ್ದು , 9 ಪ್ರಕರಣಗಳಲ್ಲಿ 'ಬಿ' ವರದಿ ಸಲ್ಲಿಸಲಾಗಿದೆ. ಇನ್ನು 31 ಪ್ರಕರಣಗಳು ನ್ಯಾಯಾಲಯದ ವಿಚಾರಣಾ ಹಂತದಲ್ಲಿದ್ದು , 1 ಪ್ರಕರಣವನ್ನು ಇತರೆ ರೀತಿಯಲ್ಲಿ ವಿಲೇವಾರಿ ಮಾಡಲಾಗಿದೆ.

ನ್ಯಾಯಾಲಯದಲ್ಲಿ 2026 ರ ಜೂನ್‌ನಿಂದ ಆಗಸ್ಟ್ ಅಂತ್ಯದವರೆಗಿನ ಅವಧಿಯಲ್ಲಿ ಒಟ್ಟು 7 ಮೊಕದ್ದಮೆಗಳನ್ನು ವಿಲೇವಾರಿ ಮಾಡಲಾಗಿದ್ದು, ಆಗಸ್ಟ್ ಅಂತ್ಯದ ವೇಳೆಗೆ 161 ಪ್ರಕರಣಗಳು ಬಾಕಿ ಉಳಿದಿವೆ ಎಂದು ಸರ್ಕಾರಿ ಅಭಿಯೋಜಕರಾದ ಕೆ. ಜಯಮ್ಮ ಅವರು ತಿಳಿಸಿದ್ದಾರೆ.

ಆಗಸ್ಟ್ ತಿಂಗಳಿನಲ್ಲಿ ಪ್ರಾರಂಭದಲ್ಲಿದ್ದ 151 ಪ್ರಕರಣಗಳ ಜೊತೆಗೆ 13 ಹೊಸ ಮೊಕದ್ದಮೆಗಳು ಸ್ವೀಕೃತಗೊಂಡು ಒಟ್ಟು 164 ಪ್ರಕರಣಗಳು ವಿಲೇವಾರಿಗೆ ಲಭ್ಯವಿದ್ದವು. ಇವುಗಳಲ್ಲಿ 3 ಪ್ರಕರಣಗಳು (ಆರೋಪಿಗಳ ಬಿಡುಗಡೆ) ವಿಲೇವಾರಿಯಾಗಿದ್ದು, ಆಗಸ್ಟ್ ಅಂತ್ಯದ ವೇಳೆಗೆ ಒಟ್ಟು 161 ಪ್ರಕರಣಗಳು ಬಾಕಿ ಉಳಿದಿವೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೇಖರ್ ಹೆಚ್.ಟಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಸಿದ್ದಲಿಂಗೇಶ್, ಮಹಾನಗರ ಪಾಲಿಕೆ ಆಯುಕ್ತ ಮಹಾಂತೇಶ, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್, ಡಿಹೆಚ್‌ಒ ಡಾ. ಕೃಷ್ಣ, ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ.ಯೋಗೇಂದ್ರ ಹಾಗೂ ಸಮಿತಿಯ ಸದಸ್ಯರುಗಳು ಉಪಸ್ಥಿತರಿದ್ದರು.



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 28– ವಿದ್ಯಾನಗರದ ಕುವೆಂಪು ಕನ್ನಡ ಭವನದಲ್ಲಿ ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಆಯೋಜಿಸಲಾಗಿದ್ದ ಮೈಸೂರು ಸಂಸ್ಥಾನದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಪುತ್ಥಳಿಗೆ ದೇಣಿಗೆ ನೀಡಿದ ನಗರದ ಬೆಳ್ಳಿ, ಬಂಗಾರದ ಉದ್ಯಮಿ ವಾಸುದೇವ ಎಲ್.ರಾಯ್ಕರ್ ಅವರನ್ನು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಸನ್ಮಾನಿಸಿದರು. ಈ ವೇಳೆ ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ದೂಡ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ, ಈಶ್ವರೀಯ ವಿದ್ಯಾಲಯದ ಲೀಲಾಜಿ, ಕಸಾಪ ಜಿಲ್ಲಾಧ್ಯಕ್ಷ ಬಿ.ವಾಮದೇವಪ್ಪ, ಕಿರುವಾಡಿ ಗಿರಿಜಮ್ಮ ಇತರರು ಇದ್ದರು.

ಸಫಾಯಿ ಕರ್ಮಚಾರಿಗಳ ಕ್ಷೇಮಾಭಿವೃದ್ಧಿಗೆ ಆದ್ಯತೆ: ಉಚಿತ ಲಸಿಕೆ, ಸುರಕ್ಷತಾ ಉಪಕರಣ ಸೌಲಭ್ಯ ಒದಗಿಸಲು ಕಟ್ಟುನಿಟ್ಟಿನ ನಿರ್ದೇಶನ : ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 28– ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿಗಳು ಮತ್ತು ಪೌರಕಾರ್ಮಿಕರ ಹಿತರಕ್ಷಣೆ ಹಾಗೂ ಕ್ಷೇಮಾಭಿವೃದ್ಧಿಗೆ ಜಿಲ್ಲಾಡಳಿತ ಬದ್ಧವಾಗಿದ್ದು, ಅವರಿಗೆ ದೊರೆಯಬೇಕಾದ ಎಲ್ಲಾ ಸೌಲಭ್ಯಗಳನ್ನು ತಕ್ಷಣವೇ ತಲುಪಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಅವರು ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಪುನರ್ ವಸತಿ ಕಾಯ್ದೆ –2013 ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನೈರ್ಮಲ್ಯ ಕೆಲಸದಲ್ಲಿ ತೊಡಗಿರುವ ಪ್ರತಿಯೊಬ್ಬ ಸಫಾಯಿ ಕರ್ಮಚಾರಿಗಳ ಆರೋಗ್ಯ ಸುರಕ್ಷತೆಗೆ ಆದ್ಯತೆ ನೀಡಲಾಗಿದೆ. ಇವರಿಗೆ ಕಡ್ಡಾಯವಾಗಿ ಹೆಪಟೈಟಿಸ್ ಬಿ ಹಾಗೂ ಹರ್ಪಿಸ್ ಲಸಿಕೆಗಳನ್ನು ಉಚಿತವಾಗಿ ನೀಡಲು ಮತ್ತು ಸಂಪೂರ್ಣ ರಕ್ತ ಪರೀಕ್ಷೆ ಸೇರಿದಂತೆ ಸಮಗ್ರ ಆರೋಗ್ಯ ತಪಾಸಣೆ ನಡೆಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಥಳೀಯ ಸಂಸ್ಥೆಗಳಲ್ಲಿ ಸೇವೆಯಲ್ಲೊಡಗಿರುವ ಕಾರ್ಮಿಕರಿಗೆ ಅಗತ್ಯವಿರುವ ಎಲ್ಲಾ ರೀತಿಯ ರಕ್ಷಣಾತ್ಮಕ/ಸುರಕ್ಷತಾ ಉಪಕರಣಗಳನ್ನು ಕಡ್ಡಾಯವಾಗಿ ಒದಗಿಸಬೇಕು. ಹಿಂದೆ ಗುರುತಿನ ಚೀಟಿ ಪಡೆಯದೆ ವಂಚಿತರಾದ ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಪಟ್ಟಿಯಲ್ಲಿ ಹೆಸರು ನಮೂದಾಗಿರುವ ಅರ್ಹ ಕಾರ್ಮಿಕರ ಪಟ್ಟಿಯನ್ನು ಮರು–ಪರಿಶೀಲಿಸಿ, ತಕ್ಷಣವೇ ಅಧಿಕೃತ ಗುರುತಿನ ಚೀಟಿಗಳನ್ನು ಹಂಚಿಕೆ ಮಾಡಲು ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚನೆ ನೀಡಿದರು.

ಸಫಾಯಿ ಕರ್ಮಚಾರಿಗಳ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಎಸ್‌ಎಸ್‌ಪಿ (SSP) ಪೋರ್ಟಲ್ ಮೂಲಕ ಸ್ಕಾಲರ್‌ಶಿಪ್‌ಗೆ ಅರ್ಜಿ ಸಲ್ಲಿಸುವಾಗ ಪ್ರತ್ಯೇಕ ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳಿಗೆ ಕೆ.ಎ.ಎಸ್, ಐ.ಎ.ಎಸ್ ಹಾಗೂ ಐ.ಪಿ.ಎಸ್ ನಂತಹ ಉನ್ನತ ಹಂತದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿಶೇಷ ತರಬೇತಿ ನೀಡುವ ಸೌಲಭ್ಯ ಹಾಗೂ ಉನ್ನತ ವ್ಯಾಸಂಗಕ್ಕಾಗಿ ಯುನೈಟೆಡ್ ಕಿಂಗ್‌ಡಮ್ ಸೇರಿದಂತೆ ವಿದೇಶಕ್ಕೆ ತೆರಳುವ ಅರ್ಹ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು ಒದಗಿಸುವ ಯೋಜನೆಗಳು ಲಭ್ಯವಿವೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಈ ಎಲ್ಲಾ ಕಲ್ಯಾಣ ಕಾರ್ಯಕ್ರಮಗಳು ಹಾಗೂ ಶೈಕ್ಷಣಿಕ ಸೌಲಭ್ಯಗಳನ್ನು ಒಳಗೊಂಡ ಸಮಗ್ರ 'ಕೈಪಿಡಿ'ಯನ್ನು ತಯಾರಿಸಿ ಪ್ರತಿಯೊಂದು ಕುಟುಂಬಕ್ಕೂ ವಿತರಿಸುವ ಮೂಲಕ ಜಾಗೃತಿ ಮೂಡಿಸಲು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೇಖರ್ ಹೆಚ್.ಟಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಸಿದ್ದಲಿಂಗೇಶ್, ಮಹಾನಗರ ಪಾಲಿಕೆ ಆಯುಕ್ತ ಮಹಾಂತೇಶ, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್, ಡಿಹೆಚ್‌ಒ ಡಾ. ಕೃಷ್ಣ ಹಾಗೂ ಸಮಿತಿಯ ಸದಸ್ಯರುಗಳು ಉಪಸ್ಥಿತರಿದ್ದರು.

ಮಾರಮ್ಮ ಹಬ್ಬಕ್ಕೆ ಮುನ್ನ ಸ್ವಚ್ಛತೆ, ಬೀದಿ ದೀಪ ವ್ಯವಸ್ಥೆಗೆ ಆಗ್ರಹ



"ಮುಂಜಾನೆಯ ಮೆರಗು"

ಜಗಳೂರು ಸೆ, 28– ತಾಲೂಕಿನ ಜಗಳೂರು ಗೊಲ್ಲರಹಟ್ಟಿ ಗ್ರಾಮದಲ್ಲಿ ಮಂಗಳವಾರ ಮಾರಮ್ಮನ ಹಬ್ಬ ನಡೆಯಲಿದ್ದು, ಹಬ್ಬದ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಸ್ವಚ್ಛತೆ ಹಾಗೂ ಬೀದಿ ದೀಪಗಳ ಸಮರ್ಪಕ ವ್ಯವಸ್ಥೆ ಕಲ್ಪಿಸಬೇಕು ಎಂದು ಗ್ರಾಮಸ್ಥ ಬೋರಣ್ಣ ಅವರು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ (ಇಒ) ಕೆಂಚಪ್ಪ ಅವರಿಗೆ ಮನವಿ ಮಾಡಿದರು.

ಸೋಮವಾರ ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ಇಒ ಕೆಂಚಪ್ಪ ಅವರನ್ನು ಭೇಟಿ ಮಾಡಿದ ಬೋರಣ್ಣ, ಹಬ್ಬದ ಸಂದರ್ಭದಲ್ಲಿ ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಹಾಗೂ ಸಾರ್ವಜನಿಕರು ಸೇರುವ ಸಾಧ್ಯತೆಯಿದೆ. ಆದರೆ ಗ್ರಾಮದಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳದಿರುವುದು ಹಾಗೂ ಬೀದಿ ದೀಪಗಳ ವ್ಯವಸ್ಥೆ ಸಮರ್ಪಕವಾಗಿಲ್ಲದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುವ ಸಾಧ್ಯತೆಯಿದೆ ಎಂದು ಗಮನ ಸೆಳೆದರು.

ಹಬ್ಬದ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಸ್ವಚ್ಛತಾ ಕಾರ್ಯಕ್ಕೆ ಆದ್ಯತೆ ನೀಡುವುದರ ಜೊತೆಗೆ, ಅಗತ್ಯವಿರುವ ಕಡೆಗಳಲ್ಲಿ ಬೀದಿ ದೀಪಗಳನ್ನು ದುರಸ್ತಿ ಮಾಡಿ ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಸಾರ್ವಜನಿಕರ ಸುರಕ್ಷತೆ ಹಾಗೂ ಅನುಕೂಲಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡುವಂತೆ ಮನವಿ ಮಾಡಿದರು.

ಮನವಿ ಆಲಿಸಿದ ಇಒ ಕೆಂಚಪ್ಪ ಅವರು, ಗ್ರಾಮದಲ್ಲಿ ಸ್ವಚ್ಛತೆ ಹಾಗೂ ಬೀದಿ ದೀಪಗಳ ಸಮಸ್ಯೆಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಂಡು ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದರು.

ಮೈಸೂರು ದಸರಾ ಉದ್ಘಾಟನೆಗೆ ಗವಿಸಿದ್ದೇಶ್ವರ ಶ್ರೀಗಳಿಗೆ ಅಧಿಕೃತ ಆಹ್ವಾನ



"ಮುಂಜಾನೆಯ ಮೆರಗು"

ಕೊಪ್ಪಳ,ಸೆ.28– ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಉದ್ಘಾಟಕರಾಗಿ ಆಯ್ಕೆಯಾಗಿರುವ ಕೊಪ್ಪಳದ ಶ್ರೀ ಗವಿಮಠದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮೀಜಿಯವರಿಗೆ ಇಂದು ಅಧಿಕೃತವಾಗಿ ಆಹ್ವಾನ ನೀಡಲಾಯಿತು. ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ ಅವರು ಫಲಪುಷ್ಪ ನೀಡಿ ಶ್ರೀಗಳನ್ನು ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಆಹ್ವಾನಿಸಿದರು.

ನಾಡಹಬ್ಬ ಮೈಸೂರು ದಸರಾ ಮಹೋತ್ಸವಕ್ಕೆ ಈ ಬಾರಿ ಕೊಪ್ಪಳದ ಗವಿಮಠದ ಶ್ರೀಗಳು ಚಾಲನೆ ನೀಡಲಿರುವುದು ಜಿಲ್ಲೆಯ ಭಕ್ತರು ಹಾಗೂ ಸಾರ್ವಜನಿಕರಲ್ಲಿ ಸಂತಸ ತಂದಿದೆ. ಈ ಮೂಲಕ ಕೊಪ್ಪಳದ ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರ–ಕ್ಕೆ ರಾಜ್ಯಮಟ್ಟದಲ್ಲಿ ಮತ್ತೊಂದು ಗೌರವ ದೊರೆತಂತಾಗಿದೆ.

ಮೈಸೂರು ದಸರಾ ಉದ್ಘಾಟಕರಾಗಿ ಗವಿಸಿದ್ದೇಶ್ವರ ಶ್ರೀಗಳನ್ನು ಆಯ್ಕೆ ಮಾಡಿರುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಧಾನಮಂಡಲದ ಸದನದಲ್ಲಿ ಘೋಷಿಸಿದ್ದರು. ಈ ಘೋಷಣೆಯ ಬೆನ್ನಲ್ಲೇ ಶ್ರೀಗಳ ದಸರಾ ಉದ್ಘಾಟನೆಯ ಕುರಿತು ರಾಜ್ಯಾದ್ಯಂತ ಚರ್ಚೆ ನಡೆದಿತ್ತು. ಇದೀಗ ಅಧಿಕೃತ ಆಹ್ವಾನ ನೀಡಿರುವುದರಿಂದ ದಸರಾ ಕಾರ್ಯಕ್ರಮದಲ್ಲಿ ಶ್ರೀಗಳ ಭಾಗವಹಿಸುವಿಕೆಗೆ ಸಂಬಂಧಿಸಿದ ಪ್ರಕ್ರಿಯೆ ಮತ್ತೊಂದು ಹಂತ ತಲುಪಿದೆ.

ಗವಿಮಠವು ಧಾರ್ಮಿಕ ಚಟುವಟಿಕೆಗಳ ಜೊತೆಗೆ ಶಿಕ್ಷಣ, ಆರೋಗ್ಯ, ದಾಸೋಹ ಸೇರಿದಂತೆ ವಿವಿಧ ಸಾಮಾಜಿಕ ಸೇವಾ ಕಾರ್ಯಗಳ ಮೂಲಕ ಗುರುತಿಸಿಕೊಂಡಿದೆ. ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಶ್ರೀಗಳಿಗೆ ದೊರೆತಿರುವ ಆಹ್ವಾನವು ಕೊಪ್ಪಳ ಜಿಲ್ಲೆಯ ಜನರಲ್ಲಿ ವಿಶೇಷ ಆಸಕ್ತಿ ಮೂಡಿಸಿದ್ದು, ಶ್ರೀಗಳು ದಸರಾ ವೇದಿಕೆಯಲ್ಲಿ ನೀಡಲಿರುವ ಸಂದೇಶದ ಕುರಿತು ಭಕ್ತರು ಕಾತರದಿಂದ ಕಾಯುತ್ತಿದ್ದಾರೆ.

ಈ ಸಂದರ್ಭದಲ್ಲಿ ಸಂಸದ ರಾಜಶೇಖರ್ ಹಿಟ್ನಾಳ್, ಶಾಸಕ ಕೆ. ರಾಘವೇಂದ್ರ ಹಿಟ್ನಾಳ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ನಾಗಪ್ಪ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ಸುರೇಶ್ ಇಟ್ನಾಳ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಸನ್ನ ಗಡಾದ್, ಗ್ಯಾರಂಟಿ ಯೋಜನೆ ಅಧ್ಯಕ್ಷ ಶ್ರೀನಿವಾಸ ರೆಡ್ಡಿ ಉಪಸ್ಥಿತರಿದ್ದರು.



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 28– ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ವತಿಯಿಂದ ಜಿಲ್ಲಾಧಿಕಾರಿ ಕಛೇರಿ ಮುಂಭಾಗದಲ್ಲಿ ಕಪ್ಪುಪಟ್ಟಿ ಧರಿಸಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಈ ಸಂದರ್ಭದಲ್ಲಿ ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ್, ಶಾಸಕ ಸಾಮರ್ಥ್ ಶಾಮನೂರು, ಕಾಂಗ್ರೆಸ್ ವಕ್ತಾರ ಡಿ.ಬಸವರಾಜ್, ಕೆಪಿಸಿಸಿ ಎಸ್ಟಿ ಘಟಕದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ.ಪಾಲಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಂಬತ್ತಳ್ಳಿ ಮಂಜಣ್ಣ ಸೇರಿದಂತೆ ಇತರರಿದ್ದರು.

ಕ್ಷಯರೋಗ (ಟಿಬಿ) ಮುಕ್ತ ಸಮಾಜಕ್ಕೆ ಆರಂಭಿಕ ಪತ್ತೆ ಹಾಗೂ ಕಡ್ಡಾಯ ಚಿಕಿತ್ಸೋಂದಣಿ ಅಗತ್ಯ: ಉಪವಿಭಾಗಾಧಿಕಾರಿ ಸಂತೋಷ್ ಕುಮಾರ್



"ಮುಂಜಾನೆಯ ಮೆರಗು"

ದಾವಣಗೆರೆ, ಸೆ, 28– ಕ್ಷಯ–ರೋಗ (ಟಿಬಿ) ನಿರ್ಮೂಲನೆಗಾಗಿ ಹಮ್ಮಿಕೊಳ್ಳಲಾಗಿರುವ 'ಟಿಬಿ ಮುಕ್ತ ಭಾರತ ಅಭಿಯಾನ'ದಡಿ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ತಪಾಸಣೆ ಹಾಗೂ ಚಿಕಿತ್ಸಾ ಕ್ರಮಗಳನ್ನು ತೀವ್ರಗೊಳಿಸಬೇಕು ಎಂದು ಉಪವಿಭಾಗಾಧಿಕಾರಿ ಹಾಗೂ ದಾವಣಗೆರೆ, ಜಗಳೂರು ಮತ್ತು ಹರಿಹರ ತಾಲೂಕು ನೊಡೆಲ್ ಅಧಿಕಾರಿ ಸಂತೋಷ್ ಕುಮಾರ್ ಅವರು ವೈದ್ಯರು ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಸೋಮವಾರ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ 'ಟಿಬಿ ಮುಕ್ತ ಭಾರತ ಅಭಿಯಾನ'ದ ಜಿಲ್ಲಾಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾಜದಲ್ಲಿ ಕ್ಷಯರೋಗ ಮುಕ್ತ ವಾತಾವರಣ ನಿರ್ಮಿಸಲು ರೋಗವನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚುವುದು ಅತ್ಯಂತ ಅಗತ್ಯವಾಗಿದೆ. ಇದರಿಂದ ರೋಗಿಯು ಇತರರಿಗೆ ಸೋಂಕು ಹರಡುವುದು ತಡೆಯಲ್ಪಡುತ್ತದೆ. ಅಲ್ಲದೆ, ಸಾವಿನ ಪ್ರಮಾಣ ಕಡಿಮೆಯಾಗಿ ರೋಗಿ ಸಂಪೂರ್ಣವಾಗಿ ಗುಣಮುಖನಾ

2 ಗುಂಪುಗಳ ನಡುವೆ ಮಾರಾಮಾರಿ
ದೀಪಕ್ ಅಲಿಯಾಸ್ ದೀಪು ಕೊಲೆಯಾದ ಯುವಕ



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.28– ಕ್ಷುಲ್ಲಕ ವಿಚಾರಕ್ಕೆ ಎರಡು ಗುಂಪುಗಳ ನಡುವೆ ಮಾರಾಮಾರಿ ನಡೆದು ಒಬ್ಬನ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ಪೀಣ್ಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಚೊಕ್ಕಸಂದ್ರದ ನಿವಾಸಿ ದೀಪಕ್ ಅಲಿಯಾಸ್ ದೀಪು (26) ಕೊಲೆಯಾದ ಯುವಕ. ಈತ ಮಾದನಾಯಕನಹಳ್ಳಿಯಲ್ಲಿರುವ ಲಾಜಿಸ್ಟಿಕ್ ಸಂಸ್ಥೆಯಲ್ಲಿ ವಾಹನ ಚಾಲಕರಾಗಿದ್ದರು.

ಮೊನ್ನೆ ರಾತ್ರಿ ದೀಪಕ್ ತನ್ನ ಸ್ನೇಹಿತರಾದ ಈಶ್ವರ್ ನೇಪಾಳಿ, ಸುಮನ್ ಹಾಗೂ ಇನ್ನಿತರರೊಂದಿಗೆ ಗುಲ್ಬರ್ಗ ಕಾಲೋನಿಗೆ ಹೋಗಿದ್ದಾಗ ಕ್ಷುಲ್ಲಕ ವಿಚಾರಕ್ಕೆ ಸ್ಥಳೀಯ ಹುಡುಗರ ನಡುವೆ ಗಲಾಟೆಯಾಗಿದೆ.

ಇದೇ ಜಿದ್ದಿನಿಂದ ಗುಲ್ಬರ್ಗ ಕಾಲೋನಿಯ ಜೋಪಡಿ ಹುಡುಗರು ನಿನ್ನೆ ತಡರಾತ್ರಿ 11.50 ರ ಸುಮಾರಿನಲ್ಲಿ ಚೊಕ್ಕಸಂದ್ರಕ್ಕೆ ಬಂದು ದೀಪಕ್ ಹಾಗೂ ಇನ್ನಿತರರ ಜೊತೆ ಗಲಾಟೆ ಮಾಡಿ ಹೊಡೆದಾಡಿಕೊಂಡಿದ್ದಾರೆ. ಆ ವೇಳೆ ಈ ಗುಂಪು ಚಾಕು, ಮಾರಕಾಸ್ತ್ರಗಳಿಂದ ದಾಳಿ ಮಾಡಿ ಪರಾರಿಯಾಗಿದೆ. ಚಾಕು ಇರಿತಕ್ಕೊಳಗಾದ ದೀಪಕ್ ಗಂಭೀರ ಗಾಯಗೊಂಡು ಮೃತಪಟ್ಟಿದ್ದಾನೆ. ಹೊಡೆದಾಟದಲ್ಲಿ ಸುಮನ್ ಹಾಗೂ ಶರಣಪ್ಪ ಸೇರಿದಂತೆ ಮೂವರು ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಸುದ್ದಿ ತಿಳಿಯುತ್ತಿದ್ದಂತೆ ಪೀಣ್ಯ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಬಂಧನಕ್ಕೆ ಕಾರ್ಯಾಚರಣೆ ನಡೆಸುತ್ತಿದ್ದರು.ಆರು ಮಂದಿ ಬಂಧನ: ಘಟನೆ ನಡೆದ ಕೆಲವೇ ಗಂಟೆಗಳಲ್ಲಿ ಆರೋಪಿಗಳಾದ ಸಂತೋಷ್ , ಮಹಿಪಾಲ್, ರಾಜೇಶ್, ಬನ್ನಪ್ಪ, ಚಂದು ಮತ್ತು ದೇವ ಎಂಬಾತನನ್ನು ಪೊಲೀಸರು ಬಂಧಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮುಂಜಾನೆಯ ಮೆರಗು
ಮುಂಜಾನೆಯ ಮೆರಗು ಕನ್ನಡ ದಿನ ಪತ್ರಿಕೆಯನ್ನು ದಿನನಿತ್ಯ ತಪ್ಪದೇ ಓದಿರಿ

ಬರ ನಿರ್ವಹಣೆಗೆ ಕೇಂದ್ರದ ಅನುದಾನ ದೊರೆಯದಿದ್ದರೆ ಸುಪ್ರೀಂಗೆ ಮೊರೆ: ಉಪ ಮುಖ್ಯಮಂತ್ರಿ ಪರಮೇಶ್ವರ್



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.28– ಬರ ನಿರ್ವಹಣೆಗೆ ಕೇಂದ್ರ ಸರ್ಕಾರದಿಂದ ಅನುದಾನ ದೊರೆಯದೇ ಇದ್ದರೆ ಮತ್ತೆ ಸುಪ್ರೀಂ ಕೋರ್ಟ್ ಮೊರೆ ಹೋಗುವುದು ಅನಿವಾರ್ಯವಾಗಲಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಹಾಗೂ ಸಂಬಂಧಪಟ್ಟವರು ಅಂತಹ ಅವಕಾಶವನ್ನು ನೀಡಬಾರದು ಎಂದು ಹೇಳಿದರು.

ರಾಜ್ಯದಲ್ಲಿನ ಬರ ಅಧ್ಯಯನಕ್ಕಾಗಿ ಕೇಂದ್ರದಿಂದ ಹಿರಿಯ ಅಧಿಕಾರಿಗಳನ್ನೊಳಗೊಂಡ 3 ತಂಡಗಳು ರಾಜ್ಯಕ್ಕಾಗಮಿಸಲಿವೆ. ತುಮಕೂರು, ಚಿತ್ರದುರ್ಗ, ದಾವಣಗೆರೆ ಭಾಗದಲ್ಲಿ ಒಂದು ತಂಡ, ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಮತ್ತೊಂದು ತಂಡ ಹಾಗೂ ಮಂಡ್ಯ, ಮೈಸೂರು, ಚಾಮರಾಜನಗರ ಸೇರಿದಂತೆ ಮೈಸೂರು ಭಾಗದಲ್ಲಿ ಮೂರನೇ ತಂಡ ಅಧ್ಯಯನ ನಡೆಸಲಿದೆ ಎಂದು ಹೇಳಿದರು.

ಕೇಂದ್ರದ ತಂಡಗಳು ಬರಪೀಡಿತ ಪ್ರದೇಶಗಳಲ್ಲಿ ಅಧ್ಯಯನ ನಡೆಸಿ ತಮ ವರದಿಯನ್ನು ಸಲ್ಲಿಸಲಿವೆ. ರಾಜ್ಯ ಸರ್ಕಾರ ಈಗಾಗಲೇ ಕೇಂದ್ರಕ್ಕೆ ಮೆಮೊರಾಂಡಂ ಸಲ್ಲಿಸಿದ್ದು, ಅದರ ಆಧಾರದ ಮೇಲೆಯೇ ಕೇಂದ್ರದ ತಂಡಗಳು ಪರಿಶೀಲನೆ ನಡೆಸಲಿವೆ. ಇದರ ಜೊತೆಗೆ ರಾಜ್ಯ ಸರ್ಕಾರದಿಂದ ಮತ್ತೊಂದು ಮೆಮೊರಾಂಡಂ ಕೂಡ ಸಲ್ಲಿಸಲಾಗುವುದು ಎಂದು ಹೇಳಿದರು. ಕೇಂದ್ರದ ತಂಡಗಳಿಗೆ ತಮದೇ ಆದ ಮಾರ್ಗಸೂಚಿಗಳಿವೆ. ರಾಜ್ಯ ಸರ್ಕಾರವೂ ಬರ ತಾಲ್ಲೂಕುಗಳನ್ನು ಘೋಷಿಸುವ ಸಂದರ್ಭದಲ್ಲಿ ಇದೇ ಮಾರ್ಗಸೂಚಿಗಳನ್ನು ಅನುಸರಿಸಿದೆ ಎಂದು ಹೇಳಿದರು.

ಮಾರ್ಗಸೂಚಿಗಳ ವ್ಯಾಪ್ತಿಗೆ ಒಳಪಡದ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿಲ್ಲ. ಸದ್ಯ ಇನ್ನಷ್ಟು ಗ್ರೌಂಡ್ ಟ್ರೂಥಿಂಗ್ ನಡೆಯುತ್ತಿದೆ. ಅದು ಪೂರ್ಣಗೊಂಡ ಬಳಿಕ ಅಂತಿಮ ಮೆಮೊರಾಂಡಂ ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು. ಸೆಪ್ಟೆಂಬರ್ 30ಕ್ಕೆ ಮುಂಗಾರು ಅವಧಿ ಮುಕ್ತಾಯವಾಗಲಿದ್ದು, ಅದರ ನಂತರ ಅಕ್ಟೋಬರ್ ಮೊದಲ ವಾರದಲ್ಲೇ ಅಂತಿಮ ಮೆಮೊರಾಂಡಂ ಸಲ್ಲಿಸಲು ಉದ್ದೇಶಿಸಲಾಗಿದೆ. ರಾಜ್ಯದ ನಷ್ಟ ಹಾಗೂ ಅಗತ್ಯವಿರುವ ಪರಿಹಾರದ ಕುರಿತು ಸಮಗ್ರ ಮಾಹಿತಿಯನ್ನು ಒಳಗೊಂಡ ವರದಿಯನ್ನು ಕೇಂದ್ರದ ಮುಂದೆ ಮಂಡಿಸಲಾಗುವುದು ಎಂದು ಹೇಳಿದರು.

ಬರ ಯಾವುದೇ ಪಕ್ಷದ ಸಮಸ್ಯೆಯಲ್ಲ. ಇದು ಕರ್ನಾಟಕದ ಜನರ ಹಿತಾಸಕ್ತಿಗೆ ಸಂಬಂಧಿಸಿದ ವಿಷಯ. ಆದ್ದರಿಂದ ಎಲ್ಲರೂ ತಮ ಜವಾಬ್ದಾರಿಯನ್ನು ಹಂಚಿಕೊಳ್ಳಬೇಕು. ಕೇಂದ್ರಕ್ಕೆ ಮನವಿ ಸಲ್ಲಿಸುವ ಸಂದರ್ಭದಲ್ಲಿ ಬಿಜೆಪಿಯವರೂ ನಮೊಂದಿಗೆ ಬರಬೇಕು ಎಂದು ಮತ್ತೊಮೆ ಮನವಿ ಮಾಡುವುದಾಗಿ ಅವರು ಹೇಳಿದರು.

ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಸಂದರ್ಭದಲ್ಲಿ ಅವುಗಳಿಗೆ ಹೆಚ್ಚಿನ ಹಣ ಅಗತ್ಯವಿದೆ ಎಂದು ಮೊದಲೇ ತಿಳಿದಿತ್ತು. ಆ ಹೊರೆಯನ್ನು ನಾವು ನಿರ್ವಹಿಸುತ್ತೇವೆ ಎಂದರು. ಹಣಕಾಸಿನ ಮೇಲೆ ಒತ್ತಡ ಇರುವುದನ್ನು ಯಾರೂ ಮುಚ್ಚಿಡಲು ಸಾಧ್ಯವಿಲ್ಲ. ಆದರೆ, ಕಳೆದ ಮೂರು ವರ್ಷಗಳಿಂದ ಸರ್ಕಾರ ಈ ಹಣಕಾಸಿನ ಬದ್ಧತೆಯನ್ನು ನಿರ್ವಹಿಸಿಕೊಂಡು ಬಂದಿದೆ. ಮುಂದಿನ ಎರಡು ವರ್ಷಗಳಲ್ಲೂ ಅದನ್ನು ನಿರ್ವಹಿಸುವ ಸಾಮರ್ಥ್ಯ ಸರ್ಕಾರಕ್ಕಿದೆ ಎಂದು ಅವರು ಹೇಳಿದರು.

ಪಿಂಚಣಿ ವಿಚಾರವಾಗಿ ಮಾತನಾಡಿದ ಅವರು, ಈ ಹಿಂದೆ 32 ಸಾವಿರ ಇದ್ದ ಆದಾಯದ ಮೇಲಿನ ಮಿತಿಯನ್ನು ಈಗ 1.20 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಇದರಿಂದ ಹಿಂದೆ ಪಿಂಚಣಿಯಿಂದ ಹೊರಗುಳಿದಿದ್ದ ಹಲವು ಅರ್ಹರು ಮತ್ತೆ ಯೋಜನೆಯ ವ್ಯಾಪ್ತಿಗೆ ಬರಲಿದ್ದಾರೆ ಎಂದು ತಿಳಿಸಿದರು.

ಹಿಂದೆ ಸುಮಾರು 23 ಲಕ್ಷ ಜನರ ಪಿಂಚಣಿ ರದ್ದಾಗಿತ್ತು. ಈಗ ಆದಾಯದ ಮಿತಿಯನ್ನು ಹೆಚ್ಚಿಸಿರುವುದರಿಂದ ಅರ್ಹ ಫಲಾನುಭವಿಗಳಿಗೆ ಮತ್ತೆ ಪಿಂಚಣಿ ದೊರೆಯಲಿದೆ. ಅದೇ ಸಂದರ್ಭದಲ್ಲಿ ಸೂಕ್ತ ಪ್ರಮಾಣಪತ್ರ ಸಲ್ಲಿಸದವರು ಹಾಗೂ ವಯೋಮಿತಿ ಪೂರೈಸದೇ ಇರುವ ಅರ್ಜಿಗಳನ್ನು ಪರಿಶೀಲಿಸಿ ಅನರ್ಹರನ್ನು ಹೊರಗಿಡುವ ಮೂಲಕ ವ್ಯವಸ್ಥೆಯಲ್ಲಿ ಶುದ್ಧೀಕರಣ ಮಾಡಲಾಗುವುದು ಎಂದು ಹೇಳಿದರು.

ಪ್ರಣಾಳಿಕೆಯಲ್ಲಿ ಭೂಸುಧಾರಣೆ ಕಾಯ್ದೆ ತಿದ್ದುಪಡಿ ಸೇರಿದಂತೆ ಹಲವು ವಿಚಾರಗಳನ್ನು ಪ್ರಸ್ತಾಪಿಸಲಾಗಿತ್ತು. ಅವುಗಳ ಜಾರಿಗೆ ಇನ್ನೂ ಸಮಯವಿದೆ ಎಂದು ಹೇಳಿದರು. ಮೈಸೂರು ಭಾಗದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಗ್ರಾಮಗಳಿಗೆ ಭೇಟಿ ನೀಡಿ ಜಮೀನು ಕಳೆದುಕೊಂಡವರ ಪರವಾಗಿ ಹೋರಾಟ ನಡೆಸುವುದಾಗಿ ಹೇಳಿರುವ ಕುರಿತು ಪ್ರತಿಕ್ರಿಯಿಸಿದ ಡಾ.ಜಿ.ಪರಮೇಶ್ವರ್, ಅವರು ಹೋರಾಟ ನಡೆಸುವುದಕ್ಕೆ ಯಾರೂ ಅಡ್ಡಿಪಡಿಸುವ ಪ್ರಶ್ನೆಯೇ ಇಲ್ಲ. ಅವರು ತಮ ಹೋರಾಟವನ್ನು ಮಾಡಲಿ ಎಂದು ಹೇಳಿದರು.

ನಿಗಮ ಮಂಡಳಿಗೆ ನೇಮಕಾತಿ ಕುರಿತಂತೆ ಪಕ್ಷದ ಪ್ರಮುಖರು ಶೀಘ್ರದಲ್ಲೇ ಪ್ರಮುಖ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದರು.

ಮಾವುತರು–ಕಾವಾಡಿಗರ ಉಪಹಾರ ಕೂಟ ವಿಳಂಬ : ಅಸಮಾಧಾನಗೊಂಡು
ಸ್ಥಳದಿಂದ ನಿರ್ಗಮಿಸಿದ ಶಾಸಕ ತನ್ವೀರ್ ಸೇಠ್



"ಮುಂಜಾನೆಯ ಮೆರಗು"

ಮೈಸೂರು,ಸೆ.28– ಮಾವುತರು ಹಾಗೂ ಕಾವಾಡಿಗರಿಗೆ ಆಯೋಜಿಸಿದ್ದ ಉಪಹಾರ ಕೂಟ ಮತ್ತು ಕಿಟ್ ವಿತರಣಾ ಕಾರ್ಯಕ್ರಮ ವಿಳಂಬವಾಗಿದ್ದಕ್ಕೆ ಅಸಮಾಧಾನಗೊಂಡ ಶಾಸಕ ತನ್ವೀರ್ ಸೇಠ್ ಸ್ಥಳದಿಂದ ನಿರ್ಗಮಿಸಿದ ಪ್ರಸಂಗ ನಡೆಯಿತು.

ಅರಮನೆ ಆವರಣದಲ್ಲಿ ಇಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಮಾವುತರು ಮತ್ತು ಕಾವಾಡಿಗರಿಗೆ ಉಪಹಾರ ಕೂಟ ಆಯೋಜಿಸಲಾಗಿತ್ತು. ಆದರೆ 9.30 ಆದರೂ ಕಾರ್ಯಕ್ರಮ ಆರಂಭವಾಗದ ಕಾರಣ ಬೇಸರಗೊಂಡ ಶಾಸಕ ತನ್ವೀರ್ ಸೇಠ್ ಸ್ಥಳದಿಂದ ಹೊರನಡೆದರು.

ಬೆಳಗ್ಗೆಯಿಂದ ಕಾಯುತ್ತಿದ್ದ ಮಾವುತರಿಗೆ ಗೌರವ ನೀಡಬೇಕು, ಸಮಯಕ್ಕೆ ಸರಿಯಾಗಿ ಉಪಹಾರ ನೀಡಬೇಕು, ಅವರನ್ನು ಊಟಕ್ಕಾಗಿ ಕಾಯಿಸುವುದು ಸರಿಯಲ್ಲ ಎಂದು ಶಾಸಕರು ಬೇಸರ ವ್ಯಕ್ತಪಡಿಸಿ ಕೂಡಲೇ ಅಧಿಕಾರಿಗಳಿಗೆ ಕಾರ್ಯಕ್ರಮ ಆರಂಭಿಸುವಂತೆ ಸೂಚಿಸಿದರು. ಆದರೆ ಅಧಿಕಾರಿಗಳು ಸಹ ಕಾರ್ಯಕ್ರಮವನ್ನು ಆರಂಭಿಸಲು ವಿಳಂಬ ಮಾಡಿದ್ದಕ್ಕೆ ಮತ್ತಷ್ಟು ಸಿಡಿಮಿಡಿಗೊಂಡು ಸ್ಥಳದಿಂದ ಹೊರನಡೆದರು.

ಶಿಕಾರಿಪುರದಿಂದ 'ಭಾರತ್ ಜೋಡೋ' ಯಾತ್ರೆ 2ನೇ ಯಾತ್ರೆ



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.28– ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಮರಳಿ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಭಾರತ್ ಜೋಡೊ ಯಾತ್ರೆ 2ನೇ ಸರಣಿಯನ್ನು ಕಾಂಗ್ರೆಸ್ ನಡೆಸುತ್ತಿದೆ. ಪಕ್ಷದ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಕಾಂಗ್ರೆಸ್ಸು ಒಟ್ಟು 40 ಜಿಲ್ಲೆಗಳ ಪೈಕಿ 11ರಲ್ಲಿ ಈ ಹಿಂದೆ ರಾಹುಲ್‌ಗಾಂಧಿ ಭಾರತ್‌ಜೋಡೊ ಯಾತ್ರೆ ನಡೆಸಿದ್ದರು. ಅವುಗಳನ್ನು ಬಿಟ್ಟು ಬಾಕಿಯಿರುವ 29 ಜಿಲ್ಲೆಗಳಲ್ಲಿ ಭಾರತ್‌ಜೋಡೊ ಯಾತ್ರೆ–2 ನಡೆಯಲಿದೆ. ಅದರಲ್ಲೂ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸೋಲುಕಂಡ 84 ಕ್ಷೇತ್ರಗಳಲ್ಲಿ ಯಾತ್ರೆ ಗುರಿಯಾಗಿಸಿಕೊಂಡಿದೆ ಎಂದು ಹೇಳಿದರು.

ಪ್ರತಿಯೊಂದು ಕ್ಷೇತ್ರದಲ್ಲೂ ಬೆಳಗ್ಗೆ ಪಾದಯಾತ್ರೆ ನಡೆಸಿ ಸಂಜೆ ಬಹಿರಂಗ ಸಮಾವೇಶ ನಡೆಸಲಾಗುವುದು. ಈ ವೇಳೆ ಕೇಂದ್ರ ಸರ್ಕಾರದ ವೈಫಲ್ಯಗಳು ರಾಜ್ಯ ವಿರೋಧಿ ಧೋರಣೆ ಮತ್ತು ಎಸ್‌ಐಆರ್ ಹೆಸರಿನಲ್ಲಿ ಮತದಾರರಿಗೆ ಮಾಡಲಾಗುತ್ತಿರುವ ವಂಚನೆ ಕುರಿತಂತೆ ಜನಜಾಗೃತಿ ಮೂಡಿಸಲಾಗುವುದು. ಜೊತೆಯಲ್ಲಿ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಮತ್ತು ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆಯೂ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ಯಾತ್ರೆಯನ್ನು ಸೆ.30ರಂದು ಶಿಕಾರಿಪುರದಿಂದ ಆರಂಭಿಸುವುದಾಗಿ ಸ್ಪಷ್ಟಪಡಿಸಿದರು.

ಮತ್ತೊಂದೆಡೆ ಶಿಕಾರಿಪುರದಲ್ಲಿ ಶಾಲಾ ಶಿಕ್ಷಣ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಮಧುಬಂಗಾರಪ್ಪ ಭಾರತ್‌ಜೋಡೊ ಯಾತ್ರೆ–2ರ ಪೂರ್ವ ಸಿದ್ಧತೆಗಳನ್ನು ಪರಿಶೀಲಿಸಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ನಾಲ್ಕು ವರ್ಷಗಳ ಹಿಂದೆ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ನಡೆದ ಭಾರತ್ ಜೋಡೋ ಪಾದಯಾತ್ರೆ ಒಂದು ಪುಣ್ಯದ ಪಾದಯಾತ್ರೆ. ದ್ವೇಷದ ರಾಜಕೀಯಕ್ಕೆ ಸೆಡ್ಡು ಹೊಡೆದು ಭಾರತವನ್ನು ಒಗ್ಗೂಡಿಸಲು ನಡೆದಿದ್ದ ಈ ಪಾದಯಾತ್ರೆ ಕರ್ನಾಟಕಕ್ಕೆ ಕಾಲಿಟ್ಟು 4 ವರ್ಷಗಳಾದ ಹಿನ್ನೆಲೆಯಲ್ಲಿ ಸೆ. 30ರಂದು ಶಿಕಾರಿಪುರದಲ್ಲಿ ರಾಜ್ಯಮಟ್ಟದ ಭಾರತ್ ಜೋಡೋ 2.0 ಪಾದಯಾತ್ರೆ ಆಯೋಜಿಸಲಾಗಿದೆ ಎಂದು ಹೇಳಿದರು.

2022ರ ಸೆ.30ರಂದು ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೋ ಯಾತ್ರೆ ಕರ್ನಾಟಕವನ್ನು ಗುಂಡ್ಲುಪೇಟೆ ಮೂಲಕ ಪ್ರವೇಶಿಸಿತ್ತು. ಇದು ಕೇವಲ ಪಾದಯಾತ್ರೆಯಾಗಿರಲಿಲ್ಲ, ಜಾತಿ, ಧರ್ಮದ ಹೆಸರಲ್ಲಿ ಛಿದ್ರಗೊಂಡಿರುವ ಹೃದಯಗಳನ್ನು ಮತ್ತೆ ಬೆಸೆಯಲು ನಡೆಸಿದ್ದ ಪ್ರೀತಿಯ, ಸಾಮರಸ್ಯದ ಯಾತ್ರೆಯಾಗಿತ್ತು ಎಂದು ಮಧು ಬಂಗಾರಪ್ಪ ಹೇಳಿದರು.

ಸೆ.30ರಂದು ಬೆಳಗ್ಗೆ 10 ಗಂಟೆಗೆ ಪಾದಯಾತ್ರೆ ಆರಂಭವಾಗಲಿದೆ. ಕಿಟ್ಟದಹಳ್ಳಿಯಿಂದ ಆರಂಭವಾಗಿ ಮಡ್ಡಿಕೋಟೆ ಕ್ರಾಸ್, ಹೊಸನಗರ ಕ್ರಾಸ್, ನೆಲವಾಗಿಲು ಕ್ರಾಸ್ ಮೂಲಕ ಸುಮಾರು 10 ಕಿ.ಮೀ. ಕ್ರಮಿಸಿ ಶಿಕಾರಿಪುರ ನಗರವನ್ನು ಪ್ರವೇಶಿಸಲಿದೆ ಎಂದು ಸಚಿವರು ವಿವರಿಸಿದರು.

ಇದೊಂದು ರಾಜಕೀಯ ಸಂದೇಶ ಸಾರುವ ಕಾರ್ಯಕ್ರಮ. ರಾಜ್ಯದಲ್ಲಿ ಮರಳಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ಸಂಕಲ್ಪ ಮಾಡುವ ದಿನ. ಶಿಕಾರಿಪುರದಲ್ಲಿ ಕಾಂಗ್ರೆಸ್ ಗೆಲ್ಲಿಸಿಕೊಂಡು ಬರುವುದಕ್ಕೆ ನಾವೆಲ್ಲರೂ ಪಣ ತೊಡುವ ದಿನ ಎಂದು ಹೇಳಿದರು.

ಬೆಳ್ಳಂಬೆಳಗ್ಗೆ ಬೆಂಗಳೂರಿಗೆ ನುಗ್ಗಿ ವಾಕಿಂಗ್ ಮಾಡುತ್ತಿದ್ದ ವ್ಯಕ್ತಿಯನ್ನು ಬಲಿಪಡೆದ ಕಾಡಾನೆ



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.28– ಬೆಳ್ಳಂಬೆಳಗ್ಗೆ ಸಿಲಿಕಾನ್ ಸಿಟಿಯಲ್ಲಿ ಕಾಡಾನೆ ಅಟ್ಟಹಾಸಕ್ಕೆ ವ್ಯಕ್ತಿಯೊಬ್ಬರು ಬಲಿಯಾಗಿರುವ ಘಟನೆ ನಡೆದಿದೆ.ಮೈಸೂರು ರಸ್ತೆಯ ಅಂಚೆಪಾಳ್ಯ ಗ್ರಾಮದ ನಿವಾಸಿ ನಾಗರಾಜ್ (60) ಮೃತಪಟ್ಟ ವ್ಯಕ್ತಿ.ನಾಗರಾಜ್ ಅವರು ಎಂದಿನಂತೆ ಇಂದು ಬೆಳಗಿನ ಜಾವ 5 ಗಂಟೆ ಸುಮಾರಿನಲ್ಲಿ ವಾಯುವಿಹಾರಕ್ಕೆ ತೆರಳಿದ್ದಾರೆ.

ಕೆಂಗೇರಿ ಸಮೀಪದ ಆರ್ ಆರ್ ವೈದ್ಯಕೀಯ ಕಾಲೇಜು ಹಿಂಭಾಗ ನಾಗರಾಜ್ ಅವರು ವಾಯುವಿಹಾರ ಮಾಡುತ್ತಿದ್ದಾಗ ಏಕಾಏಕಿ ಹಿಂದಿನಿಂದ ಬಂದ ಕಾಡಾನೆಯೊಂದು ದಾಳಿ ಮಾಡಿದೆ. ಅವರು ತಕ್ಷಣ ತಪ್ಪಿಸಿಕೊಳ್ಳಲು ಯತ್ನಿಸಿದರಾದರೂ ಸಾಧ್ಯವಾಗದೇ ಆನೆ ದಾಳಿಯಿಂದ ಗಂಭೀರ ಗಾಯಗೊಂಡಿದ್ದಾರೆ.

ಆ ಮಾರ್ಗದಲ್ಲಿ ಹೋಗುತ್ತಿದ್ದವರು ಗಮನಿಸಿ ತಕ್ಷಣ ಅವರನ್ನು ರಾಜರಾಜೇಶ್ವರಿ ಆಸ್ಪತ್ರೆಗೆ ಕರೆದೊಯ್ದು ದಾಖಲಿಸಿದರಾದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆ ಅರಣ್ಯ ಇಲಾಖೆ ಹಾಗೂ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ. ಘಟನಾ ಸ್ಥಳದಲ್ಲಿ ಎರಡು ಕಾಂಪೌಂಡ್‌ಗಳು ಸಹ ಉರುಳಿ ಬಿದ್ದಿವೆ.

ಜನ ವಸತಿ ಪ್ರದೇಶದಲ್ಲಿ ಕಾಡಾನೆ ಹೇಗೆ ಪ್ರತ್ಯಕ್ಷವಾಯಿತು ಎಂಬುವುದು ನಿಗೂಢವಾಗಿದೆ. ಈ ಘಟನೆಯಿಂದ ಸಿಲಿಕಾನ್ ಸಿಟಿಯ ಜನತೆ ಆತಂಕಗೊಂಡಿದ್ದಾರೆ. ಇತ್ತೀಚೆಗೆ ನಗರದ ಬನಶಂಕರಿ 6ನೇ ಹಂತ ಹಾಗೂ ಕರಿಯಣ್ಣಪಾಳ್ಯ ಸಮೀಪ ಪ್ರದೇಶಗಳಲ್ಲಿ ಚಿರತೆ ಪ್ರತ್ಯಕ್ಷವಾಗಿ ಸ್ಥಳೀಯರಲ್ಲಿ ಭೀತಿಯನ್ನುಂಟು ಮಾಡಿತ್ತು. ಚಿರತೆ ಓಡಾಟದ ದೃಶ್ಯ ಸಿಸಿ ಟಿವಿಯಲ್ಲಿ ಸೆರೆಯಾಗಿತ್ತು. ಈ ಘಟನೆ ಮಾಸುವ ಮುನ್ನವೇ ಇದೀಗ ಕಾಡಾನೆಯೊಂದು ಪ್ರತ್ಯಕ್ಷವಾಗಿರುವುದು ಇನ್ನಷ್ಟು ಆತಂಕಕ್ಕೆ ಎಡೆಮಾಡಿಕೊಟ್ಟಿದೆ.

ರೈತರ ಬಗ್ಗೆ ವಿಪಕ್ಷಗಳಿಗೆ ಕಾಳಜಿ ಇಲ್ಲ : ಸಿಎಂ ಡಿಕೆಶಿ ಕಿಡಿ



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.28– ಬರ ನಿರ್ವಹಣೆಗೆ ಕೇಂದ್ರದಿಂದ ಹೆಚ್ಚಿನ ನೆರವು ಪಡೆಯಲು ತೆರಳುವ ಸರ್ವಪಕ್ಷಗಳ ನಿಯೋಗದಲ್ಲಿ ಭಾಗವಹಿಸುತ್ತಿಲ್ಲ ಎನ್ನುವ ವಿರೋಧ ಪಕ್ಷಗಳ ನಿಲುವು ರೈತ ವಿರೋಧಿಯಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಿಡಿಕಾರಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ವಪಕ್ಷಗಳ ನಿಯೋಗದ ವಿಚಾರವಾಗಿ ಈಗಾಗಲೇ ಚರ್ಚೆಯಾಗಿದೆ. ವಿಧಾನ ಮಂಡಳದಲ್ಲಿ

ಮಳೆ ಕೊರತೆಯ ಬರೆ: ಮನೆ ಕಟ್ಟಲೂ ಟ್ಯಾಂಕರ್ ನೀರೇ ಗತಿ
ಮಧ್ಯಮ ವರ್ಗದ ಜನರಿಗೆ ಹೆಚ್ಚಿದ ಹೊರೆ

"ಮುಂಜಾನೆಯ ಮೆರಗು"

ಜಗಳೂರು ಸೆ, 28– ಮುಂಗಾರು ಮಳೆ ಕೈಕೊಟ್ಟ ಪರಿಣಾಮ ತಾಲೂಕಿನ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಳ್ಳುತ್ತಿರುವ ಬೆನ್ನಲ್ಲೇ, ಇದೀಗ ಹೊಸ ಮನೆ ಹಾಗೂ ಕಟ್ಟಡ ನಿರ್ಮಾಣ ಮಾಡಿಕೊಳ್ಳುತ್ತಿರುವವರಿಗೂ ನೀರಿನ ಕೊರತೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ನೀರು ದೊರೆಯದೆ ಹಲವರು ಅನಿವಾರ್ಯವಾಗಿ ಟ್ಯಾಂಕರ್‌ಗಳ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ಕಳೆದ ಕೆಲವು ತಿಂಗಳಿಂದ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಪರಿಣಾಮ ಅಂತರ್ಜಲ ಮಟ್ಟ ಕುಸಿಯುತ್ತಿದ್ದು, ಹಲವು ಖಾಸಗಿ ಬೋರ್‌ವೆಲ್‌ಗಳಲ್ಲಿ ನೀರಿನ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ. ಕೆಲವು ಕಡೆ ಬೋರ್‌ವೆಲ್‌ಗಳು ಸಂಪೂರ್ಣವಾಗಿ ಬತ್ತಿಹೋಗಿರುವುದರಿಂದ ಮನೆ ನಿರ್ಮಾಣಕ್ಕೆ ಅಗತ್ಯವಿರುವ ನೀರನ್ನು ದೂರದ ಪ್ರದೇಶಗಳಿಂದ ಟ್ಯಾಂಕರ್ ಮೂಲಕ ತರಿಸಿಕೊಳ್ಳಬೇಕಾದ ಸ್ಥಿತಿ ಎದುರಾಗಿದೆ.

ಕನಸಿನ ಮನೆಗೂ ನೀರಿನ ಕಂಟಕ

ಸ್ವಂತ ಮನೆ ನಿರ್ಮಿಸಿಕೊಳ್ಳಬೇಕು ಎಂಬುದು ಮಧ್ಯಮ ವರ್ಗದ ಕುಟುಂಬಗಳ ಬಹುದಿನಗಳ ಕನಸು. ನಿವೇಶನ ಪಡೆದು ಕಟ್ಟಡ ಕಾಮಗಾರಿ ಆರಂಭಿಸಿದ ಬಳಿಕ ನೀರಿನ ಸಮಸ್ಯೆ ಎದುರಾದರೆ ಕಾಮಗಾರಿಯ ವೆಚ್ಚವೂ ಹೆಚ್ಚಾಗುತ್ತಿದೆ. ಸಿಮೆಂಟ್, ಮರಳು, ಇಟ್ಟಿಗೆ ಸೇರಿದಂತೆ ನಿರ್ಮಾಣ ಸಾಮಗ್ರಿಗಳ ಜತೆಗೆ ನೀರಿನ ಖರ್ಚೂ ಹೆಚ್ಚುವರಿಯಾಗಿ ಸೇರುತ್ತಿದೆ.

ನೀರಿನ ವ್ಯವಸ್ಥೆ ಹೊಂದಿರುವವರು ಸ್ವಂತ ಬೋರ್‌ವೆಲ್ ಕೊರೆಸಿಕೊಂಡು ಕಟ್ಟಡ ನಿರ್ಮಾಣ ಮುಂದುವರಿಸುತ್ತಿದ್ದಾರೆ. ಆದರೆ ಬೋರ್‌ವೆಲ್ ಕೊರೆಸಲು ಸಾಧ್ಯವಾಗದ ಮಧ್ಯಮ ವರ್ಗದ ಕುಟುಂಬಗಳು ಪ್ರತಿಯೊಂದು ಹಂತದ ಕಾಮಗಾರಿಗೂ ಟ್ಯಾಂಕರ್ ನೀರನ್ನು ಖರೀದಿಸುವ ಅನಿವಾರ್ಯತೆಗೆ ಸಿಲುಕಿವೆ.

ಬೋರ್‌ವೆಲ್‌ಗಳಿಗೂ ಬರದ ಹೊಡೆತ

ಮಳೆ ಕೊರತೆಯಿಂದ ಅಂತರ್ಜಲ ಮರುಪೂರಣಕ್ಕೆ ತೀವ್ರ ಹಿನ್ನಡೆಯಾಗಿದ್ದು, ವರ್ಷಗಳಿಂದ ನೀರು ನೀಡುತ್ತಿದ್ದ ಕೆಲವು ಬೋರ್‌ವೆಲ್‌ಗಳಲ್ಲಿಯೂ ನೀರಿನ ಮಟ್ಟ ಕುಸಿಯುತ್ತಿದೆ. ಇದರಿಂದ ಮನೆ ನಿರ್ಮಾಣ ಮಾತ್ರವಲ್ಲದೆ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ಲಭ್ಯತೆ–ಯ ಮೇಲೂ ಪರಿಣಾಮ ಬೀರುವ ಆತಂಕ ವ್ಯಕ್ತವಾಗಿದೆ.

ಒಂದು ಕಡೆ ಕುಡಿಯುವ ನೀರಿನ ಅಗತ್ಯತೆ, ಮತ್ತೊಂದೆಡೆ ಮನೆ ನಿರ್ಮಾಣ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ನೀರಿನ ಬೇಡಿಕೆ ಹೆಚ್ಚುತ್ತಿರುವುದರಿಂದ ಲಭ್ಯವಿರುವ ನೀರಿನ ಮೂಲಗಳ ಮೇಲೆ ಒತ್ತಡ ಹೆಚ್ಚಾಗಿದೆ.

ನಿರ್ಮಾಣ ವೆಚ್ಚದ ಜತೆಗೆ ನೀರಿನ ಖರ್ಚು

ಮನೆ ಕಟ್ಟುವಾಗ ನೀರು ಸುಲಭವಾಗಿ ಸಿಗುತ್ತದೆ ಎಂಬ ಲೆಕ್ಕಾಚಾರದಲ್ಲಿದ್ದ ಕುಟುಂಬಗಳಿಗೆ ಇದೀಗ ಟ್ಯಾಂಕರ್ ನೀರು ಹೆಚ್ಚುವರಿ ಆರ್ಥಿಕ ಹೊರೆಯಾಗಿದೆ. ಕಾಮಗಾರಿಯ ಅವಧಿ ಹೆಚ್ಚಾದಷ್ಟೂ ಟ್ಯಾಂಕರ್‌ಗಳ ಸಂಖ್ಯೆಯೂ ಹೆಚ್ಚುತ್ತಿದ್ದು, ಒಟ್ಟಾರೆ ನಿರ್ಮಾಣ ವೆಚ್ಚದ ಮೇಲೂ ಪರಿಣಾಮ ಬೀರುತ್ತಿದೆ.

ತಾಲೂಕಿನಲ್ಲಿ ಮಳೆ ಕೊರತೆಯ ಪರಿಸ್ಥಿತಿ ಮುಂದುವರಿದರೆ ಕುಡಿಯುವ ನೀರಿನ ಸಮಸ್ಯೆಯ ಜತೆಗೆ ನಿರ್ಮಾಣ ಕ್ಷೇತ್ರಕ್ಕೂ ಮತ್ತಷ್ಟು ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಆದ್ದರಿಂದ ಪಟ್ಟಣ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ನೀರಿನ ಲಭ್ಯತೆ, ಬೋರ್‌ವೆಲ್‌ಗಳ ಸ್ಥಿತಿ ಹಾಗೂ ಪರ್ಯಾಯ ನೀರಿನ ಮೂಲಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕೆಂಬ ಒತ್ತಾಯ ಕೇಳಿಬರುತ್ತಿದೆ.

> "ಮನೆ ಕಟ್ಟಿಕೊಳ್ಳಲು ಅನಿವಾರ್ಯವಾಗಿ ಟ್ಯಾಂಕರ್ ನೀರಿನ ಮೊರೆ ಹೋಗಬೇಕಾಗಿದೆ. ನೀರಿನ ವ್ಯವಸ್ಥೆ ಇರುವವರು ಸ್ವಂತ ಬೋರ್‌ವೆಲ್ ಕೊರೆಸಿಕೊಂಡು ಕಟ್ಟಡ ನಿರ್ಮಿಸಿಕೊಳ್ಳುತ್ತಾರೆ. ಆದರೆ ನಮ್ಮಂತಹ ಮಧ್ಯಮ ವರ್ಗದವರಿಗೆ ಬೋರ್‌ವೆಲ್ ಕೊರೆಸುವಷ್ಟು ಆರ್ಥಿಕ ಸಾಮರ್ಥ್ಯ ಇಲ್ಲ. ಹೀಗಾಗಿ ಟ್ಯಾಂಕರ್ ನೀರನ್ನೇ ಅವಲಂಬಿಸುವುದು ಅನಿವಾರ್ಯವಾಗಿದೆ."
> **--- ಮಲ್ಲೇಶ್, ಜಗಳೂರು ಪಟ್ಟಣದ ನಿವಾಸಿ**



ಮೂರು ತಿಂಗಳಾದರೂ ಕೂಲಿ ಹಣ ಖಾತೆಗೆ ಜಮೆಯಾಗಿಲ್ಲ
ವಿಬಿಜಿ–ರಾಮ್ ಜಿ ಯೋಜನೆ, ನರೇಗಾ ಕಾರ್ಮಿಕರ ಅಳಲು



"ಮುಂಜಾನೆಯ ಮೆರಗು"

ಜಗಳೂರು, ಸೆ.28– ವಿಬಿಜಿ–ರಾಮ್ ಜಿ ಹಾಗೂ ನರೇಗಾ ಯೋಜನೆಯಡಿ ಕೆಲಸ ಮಾಡಿರುವ ಕೂಲಿ ಕಾರ್ಮಿಕರಿಗೆ ಮೂರು ತಿಂಗಳು ಕಳೆದರೂ ಕೂಲಿ ಹಣ ಪಾವತಿಯಾಗಿಲ್ಲ ಎಂದು ಆರೋಪಿಸಿ ಕ್ಯಾಸೆನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಸೋಮವಾರ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರನ್ನು ತರಾಟೆಗೆ ತೆಗೆದುಕೊಂಡರು.

ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿಗೆ ಆಗಮಿಸಿದ ಕ್ಯಾಸೆನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು, ವಾಸುದೇವ ಮೇಟಿ ಬಣದ ರೈತ ಸಂಘದ ಪದಾಧಿಕಾರಿಗಳು ಹಾಗೂ ಮಾದಿಗ ದಂಡೋರ ತಾಲೂಕು ಘಟಕದ ಪದಾಧಿಕಾರಿಗಳು, ಕೂಲಿ ಕಾರ್ಮಿಕರ ಸಮಸ್ಯೆಯನ್ನು ಅಧಿಕಾರಿಗಳ ಗಮನಕ್ಕೆ ತಂದರು.

ನರೇಗಾ ಹಾಗೂ ವಿಬಿಜಿ–ರಾಮ್ ಜಿ ಯೋಜನೆಯಡಿ ಗ್ರಾಮದಲ್ಲಿ ನೂರಾರು ಮಂದಿ ಕೆಲಸ ಮಾಡಿದ್ದು, ಕೆಲಸ ಪೂರ್ಣಗೊಳಿಸಿ ಹಲವು ತಿಂಗಳು ಕಳೆದಿದ್ದರೂ ಅವರ ಕೂಲಿ ಹಣ ಇನ್ನೂ ಖಾತೆಗಳಿಗೆ ಜಮೆಯಾಗಿಲ್ಲ. ಕೂಲಿ ಹಣವನ್ನೇ ನಂಬಿಕೊಂಡು ಕುಟುಂಬ ನಿರ್ವಹಣೆ ಮಾಡುತ್ತಿರುವ ಕಾರ್ಮಿಕರು ಇದೀಗ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಹೀಗಾಗಿ ಬಾಕಿ ಇರುವ ಕೂಲಿ ಹಣವನ್ನು ತಕ್ಷಣವೇ ಕಾರ್ಮಿಕರ ಖಾತೆಗಳಿಗೆ ಜಮಾ ಮಾಡಬೇಕು ಎಂದು ಒತ್ತಾಯಿಸಿದರು.

ಮಾದಿಗ ದಂಡೋರ ತಾಲೂಕು ಅಧ್ಯಕ್ಷ ಹನುಮಂತಪ್ಪ ಮಾತನಾಡಿ, ಗ್ರಾಮೀಣ ಭಾಗದ ಬಡ ಹಾಗೂ ಕೂಲಿ ಕಾರ್ಮಿಕರು ನರೇಗಾ ಯೋಜನೆಯಡಿ ಕೆಲಸ ಮಾಡಿದುಡಿದ ಹಣಕ್ಕಾಗಿ ತಿಂಗಳುಗಟ್ಟಲೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲಸ ಮಾಡಿಸಿಕೊಂಡು ಕೂಲಿ ನೀಡಲು ವಿಳಂಬ ಮಾಡುವುದು ಕಾರ್ಮಿಕರ ಬದುಕಿನ ಮೇಲೆ ನೇರ ಪರಿಣಾಮ ಬೀರುತ್ತಿದೆ. ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಬಾಕಿ ಕೂಲಿ ಹಣವನ್ನು ಶೀಘ್ರ ಪಾವತಿಸಬೇಕು ಎಂದು ಆಗ್ರಹಿಸಿದರು.

ದಲಿತ ಮುಖಂಡ ಸತ್ಯಮೂರ್ತಿ ಮಾತನಾಡಿ, ನರೇಗಾ ಮತ್ತು ವಿಬಿಜಿ–ರಾಮ್ ಜಿ ಯೋಜನೆಗಳು ಗ್ರಾಮೀಣ ಬಡಜನರಿಗೆ ಉದ್ಯೋಗ ಹಾಗೂ ಆದಾಯದ ಭದ್ರತೆ ಒದಗಿಸುವ ಉದ್ದೇಶ ಹೊಂದಿವೆ. ಆದರೆ ಕೆಲಸ ಮಾಡಿದ ನಂತರ ಕೂಲಿ ಪಡೆಯಲು ತಿಂಗಳುಗಟ್ಟಲೆ ಕಾಯಬೇಕಾದರೆ ಯೋಜನೆಯ ಮೂಲ ಉದ್ದೇಶವೇ ವಿಫಲವಾಗುತ್ತದೆ. ಕ್ಯಾಸೆನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾರ್ಮಿಕರಿಗೆ ಬಾಕಿ ಇರುವ ಹಣವನ್ನು ಪರಿಶೀಲಿಸಿ ತ್ವರಿತವಾಗಿ ಪಾವತಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಯುವ ಮುಖಂಡ ಕೆಂಚಪ್ಪ ಮಾತನಾಡಿ, ಕೂಲಿ ಹಣದ ಪಾವತಿಯಲ್ಲಿ ಆಗಿರುವ ವಿಳಂಬದಿಂದ ಕಾರ್ಮಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿ ತಾಂತ್ರಿಕ ಅಥವಾ ಆಡಳಿತಾತ್ಮಕ ಕಾರಣಗಳಿಂದ ಪಾವತಿ ಬಾಕಿ ಇದ್ದರೆ ಅದನ್ನು ಕೂಡಲೇ ಸರಿಪಡಿಸಬೇಕು. ಮುಂದಿನ ದಿನಗಳಲ್ಲಿ ಇಂತಹ ಸಮಸ್ಯೆ ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷ ಜಗದೀಶ್, ಅಂಜಿನಪ್ಪ, ಮೂಗಣ್ಣ, ಕಣಕಪ್ಪ, ಬಸಣ್ಣ, ಹನುಮಂತಪ್ಪ ಸೇರಿದಂತೆ ಕ್ಯಾಸೆನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಸ್ಥರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಅಧಿಕಾರಿಗಳಿಂದ ಭರವಸೆ:

ಗ್ರಾಮಸ್ಥರ ಅಹವಾಲು ಆಲಿಸಿದ ತಾಲೂಕು ಪಂಚಾಯಿತಿ ಇ.ಒ. ಕೆಂಚಪ್ಪ ಅವರು ಬಾಕಿ ಕೂಲಿ ಪಾವತಿಗೆ ಸಂಬಂಧಿಸಿದ ದಾಖಲೆಗಳು ಹಾಗೂ ಕಾಮಗಾರಿಗಳ ವಿವರಗಳನ್ನು ಪರಿಶೀಲಿಸಿ, ತಾಂತ್ರಿಕ ಕಾರಣಗಳಿಂದ ಪಾವತಿ ಬಾಕಿಯಾಗಿದ್ದರೆ ಸಂಬಂಧಪಟ್ಟ ಹಂತದಲ್ಲಿ ಕ್ರಮ ಕೈಗೊಂಡು ಕಾರ್ಮಿಕರಿಗೆ ಹಣ ತಲುಪಿಸುವ ನಿಟ್ಟಿನಲ್ಲಿ ಕ್ರಮವಹಿಸುವುದಾಗಿ ತಿಳಿಸಿದರು.

ವೀರ ಮದಕರಿ ನಾಯಕ ಜಯಂತೋತ್ಸವಕ್ಕೆ ಜಗಳೂರಿನಿಂದ ಆಹ್ವಾನ
ಅ.12, 13ರಂದು ಚಿತ್ರದುರ್ಗದಲ್ಲಿ ಅದ್ಧೂರಿ ಆಚರಣೆ: ಮಾಜಿ ಶಾಸಕ ಎಚ್.ಪಿ. ರಾಜೇಶ್

"ಮುಂಜಾನೆಯ ಮೆರಗು"

ಜಗಳೂರು, ಸೆ.28– ಚಿತ್ರದುರ್ಗ ನಾಡಿನ ವೀರ ಪರಂಪರೆ, ಸ್ವಾಭಿಮಾನ ಮತ್ತು ಹೋರಾಟದ ಪ್ರತೀಕವಾಗಿರುವ ನಾಡದೊರೆ ವೀರ ಮದಕರಿ ನಾಯಕ ಅವರ ಜಯಂತೋತ್ಸವವನ್ನು ಅ.12 ಮತ್ತು 13ರಂದು ಚಿತ್ರದುರ್ಗದಲ್ಲಿ ಅದ್ಧೂರಿಯಾಗಿ ಆಚರಿಸಲಾಗುತ್ತಿದ್ದು, ತಾಲೂಕಿನ ಸಮಾಜದ ಬಂಧುಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮಾಜಿ ಶಾಸಕ ಎಚ್.ಪಿ. ರಾಜೇಶ್ ಮನವಿ ಮಾಡಿದರು.



ಜಗಳೂರು ಪಟ್ಟಣದಲ್ಲಿ ವೀರ ಮದಕರಿ ನಾಯಕ ಜಯಂತೋತ್ಸವದ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ವೀರ ಮದಕರಿ ನಾಯಕ ಅವರು ಚಿತ್ರದುರ್ಗದ ಇತಿಹಾಸದಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿದ ಮಹಾನ್ ನಾಯಕರು. ತಮ್ಮ ನಾಡು, ಜನರು ಹಾಗೂ ಸ್ವಾಭಿಮಾನವನ್ನು ಕಾಪಾಡಲು ಅವರು ನಡೆಸಿದ ಹೋರಾಟ ಮತ್ತು ತೋರಿದ ಧೈರ್ಯ, ಸಾಹಸ ಇಂದಿಗೂ ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿದೆ ಎಂದು ಹೇಳಿದರು.

ವೀರ ಮದಕರಿ ನಾಯಕ ಅವರಂತಹ ಐತಿಹಾಸಿಕ ವ್ಯಕ್ತಿಗಳ ಜೀವನಚರಿತ್ರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಅತ್ಯಂತ ಅಗತ್ಯವಾಗಿದೆ. ಇತಿಹಾಸವನ್ನು ಕೇವಲ ಪುಸ್ತಕಗಳಲ್ಲಿ ಓದುವುದಕ್ಕಿಂತ ಅವರ ಆದರ್ಶ, ಧೈರ್ಯ, ನಾಯಕತ್ವ ಮತ್ತು ನಾಡಿನ ಮೇಲಿನ ಬದ್ಧತೆಯನ್ನು ಅರ್ಥಮಾಡಿಕೊಳ್ಳಬೇಕು. ಯುವಕರು ಇಂತಹ ಮಹನೀಯರ ಜೀವನದಿಂದ ಪ್ರೇರಣೆ ಪಡೆದು ಸಮಾಜದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಎರಡು ದಿನಗಳ ಕಾಲ ವಿವಿಧ ಕಾರ್ಯಕ್ರಮ

ಚಿತ್ರದುರ್ಗದಲ್ಲಿ ಅ.12 ಮತ್ತು 13ರಂದು ಎರಡು ದಿನಗಳ ಕಾಲ ವೀರ ಮದಕರಿ ನಾಯಕ ಜಯಂತೋತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಮಾಜದ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಜಯಂತೋತ್ಸವದ ಅಂಗವಾಗಿ ನಡೆಯುವ ಕಾರ್ಯಕ್ರಮಗಳು ವೀರ ಮದಕರಿ ನಾಯಕ ಅವರ ಶೌರ್ಯ, ಸಾಹಸ ಮತ್ತು ಐತಿಹಾಸಿಕ ಕೊಡುಗೆಗಳನ್ನು ಸ್ಮರಿಸುವುದರ ಜೊತೆಗೆ ಸಮಾಜದ ಯುವಜನರಲ್ಲಿ ಇತಿಹಾಸದ ಅರಿವು ಮೂಡಿಸುವ ವೇದಿಕೆಯಾಗಬೇಕು ಎಂಬ ಆಶಯವನ್ನು ಮುಖಂಡರು ವ್ಯಕ್ತಪಡಿಸಿದರು.

ಜಗಳೂರಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕರೆ

ಜಯಂತೋತ್ಸವದ ಅಂಗವಾಗಿ ಜಗಳೂರು ಪಟ್ಟಣದಲ್ಲಿ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ತಾಲೂಕಿನ ಜನರಿಗೆ ಅಧಿಕೃತವಾಗಿ ಆಹ್ವಾನ ನೀಡಲಾಯಿತು. ಜಗಳೂರು ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳಿಂದ ಸಮಾಜದ ಬಂಧುಗಳು ಕುಟುಂಬ ಸಮೇತರಾಗಿ ಚಿತ್ರದುರ್ಗಕ್ಕೆ ತೆರಳಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಮುಖಂಡರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸುವ ಮೂಲಕ ವೀರ ಮದಕರಿ ನಾಯಕ ಅವರ ಮೇಲಿನ ಗೌರವವನ್ನು ವ್ಯಕ್ತಪಡಿಸುವುದರ ಜೊತೆಗೆ, ಚಿತ್ರದುರ್ಗದ ಐತಿಹಾಸಿಕ ಪರಂಪರೆಯ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲಾ ಮದಕರಿ ನಾಯಕ ಉತ್ಸವ ಸಮಿತಿಯ ಗೌರವಾಧ್ಯಕ್ಷ ಎಚ್.ಜಿ. ಕೃಷ್ಣಮೂರ್ತಿ, ಅಧ್ಯಕ್ಷ ವೆಂಕಟೇಶ್, ಜಗಳೂರು ನಾಯಕ ಸಮಾಜದ ಅಧ್ಯಕ್ಷ ಬುಳ್ಳೇನಹಳ್ಳಿ ನಾಗರಾಜ್, ಸಮಾಜದ ಮುಖಂಡರಾದ ಸೂರಲಿಂಗಪ್ಪ, ಕುಬೇಂದ್ರಪ್ಪ, ಕೆ.ಎಸ್. ಪ್ರಭು, ಪಿ. ತಿಪ್ಪೇಸ್ವಾಮಿ, ಬೋರಣ್ಣ, ತಿಮ್ಮರಾಯಪ್ಪ, ಸಿದ್ದಣ್ಣ, ಶಿವಮೂರ್ತಿ, ರೇವಣ್ಣ, ಅರವಿಂದ್ ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಾರ್ವಜನಿಕರ ಅಹವಾಲು ಸ್ವೀಕರಿಸಿದ
ಶಾಸಕ ದೇವೇಂದ್ರಪ್ಪ



"ಮುಂಜಾನೆಯ ಮೆರಗು"

ಜಗಳೂರು, ಸೆ.28: ಜಗಳೂರು ವಿಧಾನಸಭಾ ಕ್ಷೇತ್ರದ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರ ಅಹವಾಲುಗಳನ್ನು ಶಾಸಕ ಬಿ.ದೇವೇಂದ್ರಪ್ಪ ಅವರು ಸೋಮವಾರ ತಮ್ಮ ಗೃಹ ಕಚೇರಿಯಲ್ಲಿ ಸ್ವೀಕರಿಸಿ, ಸಮಸ್ಯೆಗಳನ್ನು ಆಲಿಸಿದರು.

ಕ್ಷೇತ್ರದ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸಾರ್ವಜನಿಕರು ಕುಡಿಯುವ ನೀರು, ರಸ್ತೆ, ವಿದ್ಯುತ್, ಮೂಲಸೌಕರ್ಯ, ವೈಯಕ್ತಿಕ ಹಾಗೂ ವಿವಿಧ ಸರ್ಕಾರಿ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಶಾಸಕರ ಗಮನಕ್ಕೆ ತಂದರು.

ನೀರಿನ ಸಮಸ್ಯೆ ಎದುರಾದರೆ ಮೊದಲು ಸ್ಥಳೀಯ ಸಂಪನ್ಮೂಲ ಬಳಕೆ
ಅನಿವಾರ್ಯವಾದರೆ ಮಾತ್ರ ಟ್ಯಾಂಕರ್ ಮೂಲಕ ಪೂರೈಕೆ: ತಹಶೀಲ್ದಾರ್ ಗುರುಬಸವರಾಜ

"ಮುಂಜಾನೆಯ ಮೆರಗು"

ಜಗಳೂರು ಸೆ, 28– ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಳ್ಳುವ ಮುನ್ನವೇ ಮುನ್ನೆಚ್ಚರಿಕೆ ಕ್ರಮ ಕೈಗೊಂಡು ಜನರಿಗೆ ಸಮರ್ಪಕ ನೀರು ಪೂರೈಸಬೇಕು. ಗ್ರಾಮಗಳಲ್ಲಿ ಲಭ್ಯವಿರುವ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿ, ಅವುಗಳ ನೀರನ್ನು ಬಳಸಿಕೊಂಡು ಪೂರೈಕೆ ಮಾಡಲು ಮೊದಲ ಆದ್ಯತೆ ನೀಡಬೇಕು. ಇದರಿಂದಲೂ ಸಮಸ್ಯೆ ಬಗೆಹರಿಯದ ಗ್ರಾಮಗಳಿಗೆ ಮಾತ್ರ ಟ್ಯಾಂಕರ್ ಮೂಲಕ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ತಹಶೀಲ್ದಾರ್ ಗುರುಬಸವರಾಜ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲೂಕಿನ 22 ಗ್ರಾಮ ಪಂಚಾಯಿತಿಗಳ ಪಿಡಿಒಗಳು ಹಾಗೂ ನೀರುಗಂಟಿಗಳಿಗಾಗಿ ಆಯೋಜಿಸಿದ್ದ ತುರ್ತು ಸಭೆಯಲ್ಲಿ ಅವರು ಮಾತನಾಡಿದರು.

ಬೋರ್‌ವೆಲ್‌ಗಳ ಸಮಗ್ರ ಮಾಹಿತಿ ಸಂಗ್ರಹಿಸಿ

ಬೇಸಿಗೆ ಹಾಗೂ ಮಳೆ ಕೊರತೆಯ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಲಭ್ಯತೆಯ ಬಗ್ಗೆ ನಿರಂತರ ನಿಗಾ ವಹಿಸಬೇಕು. ಪ್ರತಿಯೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಬೋರ್‌ವೆಲ್‌ಗಳ ಲಭ್ಯತೆ, ನೀರಿನ ಪ್ರಮಾಣ, ಮೋಟರ್ ವ್ಯವಸ್ಥೆ ಹಾಗೂ ವಿದ್ಯುತ್ ಸಂಪರ್ಕದ ಕುರಿತು ಮಾಹಿತಿ ಸಂಗ್ರಹಿಸಬೇಕು.

ಯಾವ ಗ್ರಾಮದಲ್ಲಿ ನೀರಿನ ಕೊರತೆ ಎದ